# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 59 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಬುಧವಾರ ದಿನಾಂಕ : 09-09-2026 ಪುಟ : 04 ಬೆಲೆ : 2-00

## ಕಾಂಗ್ರೆಸ್ 50 ಸಾವಿರ ಶೌಚಾಲಯವೂ ಕಟ್ಟಲಿಲ್ಲ, ಪ್ರಧಾನಿ ಮೋದಿ ವಾಗ್ದಾಳಿ



ವಡೋದರಾ: ದೇಶದಲ್ಲಿ ಅಭಿವೃದ್ಧಿ ಕಾಮಗಾರಿಗಳ ವೇಗದ ವಿಚಾರವಾಗಿ ಹಿಂದಿನ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಗುಜರಾತ್‌ನ ವಡೋದರಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸುಮಾರು 35,000 ಕೋಟಿ ರೂ. ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ಬಳಿಕ ಬೃಹತ್ ಸಮಾವೇಶವನ್ನುದ್ದೇಶಿಸಿ ಪ್ರಧಾನಿ ಮೋದಿಯವರು ಮಾತನಾಡಿದರು.

ನವಿಮುಂಬೈನಲ್ಲಿರುವ ಜವಾಹರಲಾಲ್ ನೆಹರು ಬಂದರನ್ನು ಉತ್ತರ ಪ್ರದೇಶದ ದಾದ್ರಿಗೆ ಸಂಪರ್ಕಿಸುವ ಪಶ್ಚಿಮ ಸಮರ್ಪಿತ ಸರಕು ಸಾಗಣೆ ಮಾರ್ಗದ ಮೂರು ಪ್ರಮುಖ ವಿಭಾಗಗಳನ್ನು ಮೋದಿ ಉದ್ಘಾಟಿಸಿದರು.

ಬಳಿಕ ಸಮಾವೇಶದಲ್ಲಿ 2014ರ ಬಳಿಕ ಎನ್‌ಡಿಎ ಸರ್ಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಪ್ರಸ್ತಾಪಿಸಿ ಮಾತನಾಡಿದ ಮೋದಿಯವರು, ಕಾಂಗ್ರೆಸ್ 10 ವರ್ಷದಲ್ಲಿ 50 ಸಾವಿರ ಶೌಚಾಲಯಗಳನ್ನು ನಿರ್ಮಿಸಲು ಸಾಧ್ಯವಾಗಲಿಲ್ಲ,

2ನೇ ಪುಟಕ್ಕೆ...

## ಸಿಎಂ ಡಿಕೆ ಶಿವಕುಮಾರ್ ಆರೋಗ್ಯದಲ್ಲಿ ಏರುಪೇರು: ವಿಧಾನಸೌಧದಲ್ಲಿ ವೈದ್ಯರಿಂದ ಚಿಕಿತ್ಸೆ



ಬೆಂಗಳೂರು: ಸಿಎಂ ಡಿಕೆ ಶಿವಕುಮಾರ್ ಅವರ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾದ ಕಾರಣ ಅವರಿಗೆ ವಿಧಾನಸೌಧದಲ್ಲೇ ಚಿಕಿತ್ಸೆ ನೀಡಲಾಗಿದೆ.

ನಿರಂತರ ಕೆಲಸದ ಒತ್ತಡ ಮತ್ತು ಓಡಾಟದ ದಣಿವಿನಿಂದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ರಕ್ತದೊತ್ತಡದಲ್ಲಿ ಇಂದು ವಿಧಾನಸೌಧದಲ್ಲಿ ಏರುಪೇರು ಉಂಟಾಗಿತ್ತು. ತಕ್ಷಣವೇ ವೈದ್ಯರು ತಪಾಸಣೆ ನಡೆಸಿ ಚಿಕಿತ್ಸೆ ನೀಡಿದ್ದಾರೆ. ಬಳಿಕ ಡಿ.ಕೆ.ಶಿ ಅವರ ಆರೋಗ್ಯ ಚೇತರಿಸಿದ್ದು, ಸಹಜ ಸ್ಥಿತಿಗೆ ಮರಳಿದೆ.

ನಿನ್ನೆ ಮಧ್ಯಾಹ್ನ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಕೆಲಸದಲ್ಲಿ ನಿರತರಾಗಿದ್ದಾಗ, ಡಿ.ಕೆ. ಶಿವಕುಮಾರ್ ಅವರಿಗೆ ಅಲ್ಪ ಸುಸ್ತು ಹಾಗೂ ವ್ಯತ್ಯಾಸ ಕಂಡುಬಂದಿತ್ತು. ವಿಷಯ ತಿಳಿಯುತ್ತಿದ್ದಂತೆಯೇ ತಕ್ಷಣವೇ ವಿಧಾನಸೌಧದ ವೈದ್ಯರನ್ನು ಕರೆಸಲಾಯಿತು.

ಸಿಎಂ ಕಚೇರಿಗೆ ಆಗಮಿಸಿದ ವೈದ್ಯರ ತಂಡ ಡಿ.ಕೆ.ಶಿವಕುಮಾರ್ ಅವರ ಆರೋಗ್ಯ ತಪಾಸಣೆ ನಡೆಸಿದಾಗ ಪ್ರಾಥಮಿಕ ತಪಾಸಣೆಯಲ್ಲಿ ರಕ್ತದೊತ್ತಡದಲ್ಲಿ ಏರುಪೇರಾಗಿರುವುದು ಕಂಡುಬಂದಿದೆ. ವೈದ್ಯರ ಸಲಹೆಯಂತೆ ವಿಶ್ರಾಂತಿ ಪಡೆದ ನಂತರ ಈಗ ಅವರ ರಕ್ತದೊತ್ತಡ ಸಹಜ ಸ್ಥಿತಿಗೆ ಮರಳಿದೆ ಎಂದು ತಿಳಿದುಬಂದಿದೆ.

ಸಿಎಂ ಡಿಕೆ ಶಿವಕುಮಾರ್, ನಿನ್ನೆಯಿಂದ ರಾಜ್ಯದ ವಿವಿಧೆಡೆ ತೀವ್ರ ಪ್ರಯಾಣ ನಡೆಸಿದ್ದರು. ಇಂದು ಬೆಳಿಗ್ಗೆಯೂ ಸತತ ಸಭೆ ಹಾಗೂ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಈ ನಿರಂತರ ಓಡಾಟ ಮತ್ತು ಕೆಲಸದ ಒತ್ತಡದಿಂದಾಗಿ ರಕ್ತದೊತ್ತಡದಲ್ಲಿ ವ್ಯತ್ಯಾಸ ಉಂಟಾಗಿತ್ತು.

## ಕೊನೆಗೂ ಬಿಜೆಪಿ ಸಮಾವೇಶಕ್ಕೆ ಅನುಮತಿ ಕೊಟ್ಟ ಬಳ್ಳಾರಿ ಜಿಲ್ಲಾಡಳಿತ



ಬಳ್ಳಾರಿ: ವಿಜಯೇಂದ್ರ ನೇತೃತ್ವದಲ್ಲಿ ನಡೆಯುತ್ತಿರುವ ಬಿಜೆಪಿ ಪಾದಯಾತ್ರೆಯ ಸಮಾರೋಪ ಸಮಾರಂಭಕ್ಕೆ ಬಳ್ಳಾರಿಯ ಎಕ್ಸ್ ಮುನ್ಸಿಪಲ್ ಶಾಲಾ ಮೈದಾನ ಬಳಸಲು ಕೊನೆಗೂ ಜಿಲ್ಲಾಡಳಿತ ಷರತ್ತುಬದ್ಧ ಅನುಮತಿ ನೀಡಿದೆ. ಮೈದಾನ ಬಳಕೆಗೆ ಅನುಮತಿ ನಿರಾಕರಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಬಿಜೆಪಿ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ ಮುಖ್ಯಮಂತ್ರಿ ಸೂಚನೆ ಮೇರೆಗೆ ಜಿಲ್ಲಾಡಳಿತ ಅನುಮತಿ ನೀಡಿದೆ.

ಸೆಪ್ಟೆಂಬರ್ 10ರಂದು ಮಧ್ಯಾಹ್ನ 3ರಿಂದ ರಾತ್ರಿ 8ರವರೆಗೆ ಎಕ್ಸ್ ಮುನ್ಸಿಪಲ್ ಶಾಲಾ ಮೈದಾನದಲ್ಲಿ 'ಬಳ್ಳಾರಿ ಚಲೋ' ಪಾದಯಾತ್ರೆಯ ಸಮಾರೋಪ ಸಮಾರಂಭ ನಡೆಸಲು ಬಿಜೆಪಿ ಸಿದ್ಧತೆ ಮಾಡಿಕೊಂಡಿದೆ. ಕಾರ್ಯಕ್ರಮಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರು ಭಾಗವಹಿಸುವ ನಿರೀಕ್ಷೆಯಿದ್ದು, ಸಮಾರೋಪ ಸಮಾರಂಭವನ್ನು ಯಶಸ್ವಿಗೊಳಿಸಲು ಪಕ್ಷದ ಸ್ಥಳೀಯ ನಾಯಕರು ಪೂರ್ವತಯಾರಿಯಲ್ಲಿ ತೊಡಗಿದ್ದಾರೆ.

ಎಕ್ಸ್ ಮುನ್ಸಿಪಲ್ ಶಾಲಾ ಮೈದಾನದಲ್ಲಿ ಸಮಾರೋಪ ಸಮಾರಂಭ ನಡೆಸಲು ರಾಜ್ಯ ಸರ್ಕಾರ ಈ ಹಿಂದೆ ಅನುಮತಿ ನಿರಾಕರಿಸಿತ್ತು. ಅಲ್ಲದೆ, ಶಾಲಾ ಶಿಕ್ಷಣ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯೂ

2ನೇ ಪುಟಕ್ಕೆ...

## ರೈತರ ವಿಮೆ ಹಣ ಕಟ್ಟದ, ಸೊಸೈಟಿ ಕಾರ್ಯದರ್ಶಿ ವಜಾಕ್ಕೆ ಸಿಎಂ ಡಿಕೆಶಿ ಸೂಚನೆ



ಬೆಂಗಳೂರು: ದೇವರ ಹಿಪ್ಪರಗಿ ತಾಲ್ಲೂಕಿನ ರೈತರು ಬೆಳೆ ವಿಮೆಗೆ ಪಾವತಿಸಿದ್ದ ಹಣವನ್ನು ಡಿಸಿಸಿ ಬ್ಯಾಂಕಿಗೆ ಪಾವತಿ ಮಾಡದ ಕಾರಣ 93 ರೈತರ ವಿಮೆ ತಿರಸ್ಕಾರಗೊಂಡಿದ್ದು, ಈ ವಿಚಾರದಲ್ಲಿ ನಿರ್ಲಕ್ಷ್ಯ ತೋರಿರುವ ಸ್ವಸಹಾಯ ಸೊಸೈಟಿ ಕಾರ್ಯದರ್ಶಿ ವಜಾಗೊಳಿಸಲು ಸಿಎಂ ಸೂಚನೆ ನೀಡಿದ್ದಾರೆ.

ಮಂಗಳವಾರ ಬೆಳ್ಳಂಬೆಳಗ್ಗೆ ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿದ ಶಿವಕುಮಾರ್ ಅವರು ಅಲ್ಲಿ ಬಂದಿದ್ದ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ, ತೆಂಗು ಬೆಳೆಗಾರರು, ವರ್ತಕರು ಹಾಗೂ ಮಂಡಿ ಮಾಲೀಕರ ಜೊತೆ ಮಾತುಕತೆ ನಡೆಸಿ, ಅವರ ಸಮಸ್ಯೆ ಆಲಿಸಿದರು.

ದೇವರ ಹಿಪ್ಪರಗಿಯ ರೈತರೊಬ್ಬರು ಸಿಎಂ ಅವರನ್ನು ಭೇಟಿ ಮಾಡಿ ನಾವು ಬೆಳೆ ವಿಮೆಗೆ ಸ್ವಸಹಾಯ ಸೊಸೈಟಿಗೆ ಹಣ ಕಟ್ಟಿದ್ದು, ಅವರು ಡಿಸಿಸಿ ಬ್ಯಾಂಕಿಗೆ ಹಣ ಪಾವತಿ ಮಾಡದ ಕಾರಣ ನಮ್ಮ ವಿಮೆ ತಿರಸ್ಕೃತಗೊಂಡಿದೆ ಎಂದು ನಮಗೆ ಮೆಸೇಜ್ ಬಂದಿದೆ ಎಂದು ತಮ್ಮ ಅಳಲು ತೋಡಿಕೊಂಡರು.

ರೈತರು ಹಣ ಪಾವತಿ ಮಾಡಿರುವ ಪಟ್ಟಿ ಪರಿಶೀಲಿಸಿದ ಸಿಎಂ, ಕೂಡಲೇ ನಿರ್ಲಕ್ಷ್ಯ ತೋರಿರುವ ಅಧಿಕಾರಿಯನ್ನು ವಜಾಗೊಳಿಸುವಂತೆ ಸೂಚನೆ ನೀಡಿದರು.

ನೀವು ಈರುಳ್ಳಿ ತರಬೇಕಾದರೆ ಪೊಲೀಸರು ತಡೆದು ಹಣ ಪಡೆಯುತ್ತಾರಾ? ರೈತರಿಗೆ ಸರಿಯಾದ ಸಮಯಕ್ಕೆ ಹಣ ನೀಡುತ್ತಾ-ರೆಯೇ? ರೈತರಿಂದ ಮಾರುಕಟ್ಟೆಯವರು ಕಮಿಷನ್ ಏನಾದರೂ ಪಡೆಯುತ್ತಾರಾ? ಪ್ರತಿ ಎಕರೆಗೆ ಎಷ್ಟು ಖರ್ಚು ಆಗುತ್ತದೆ? ನಿಮ್ಮ ಬೆಳೆಯ ತೂಕ ಸರಿಯಾಗಿ ಮಾಡುತ್ತಿದ್ದಾರಾ? ಎಂದು ರೈತರನ್ನು ವಿಚಾರಿಸಿ, ಮಾಹಿತಿ ಪಡೆದರು. ತಾವೇ ಖುದ್ದಾಗಿ ಈರುಳ್ಳಿ ತೂಕವನ್ನು ಪರಿಶೀಲನೆ ನಡೆಸಿದರು.

ಕಲಬುರ್ಗಿ, ಬೀದರ್, ವಿಜಯಪುರ ಮಾರುಕಟ್ಟೆಯಲ್ಲಿ 8ರಿಂದ 10ರೂ. ಕಮಿಷನ್ ಪಡೆಯುತ್ತಾರೆ. ಯಶವಂತಪುರ

2ನೇ ಪುಟಕ್ಕೆ...

## ಆತಂಕ ಬೇಡ, ಇನ್ನೂ 25 ತಾಲ್ಲೂಕು ಬರಪೀಡಿತ ಪ್ರದೇಶಗಳೆಂದು ಶೀಘ್ರ ಘೋಷಣೆ: ಡಿಸಿಎಂ ಪರಮೇಶ್ವರ



ಬೆಂಗಳೂರು: ರಾಜ್ಯದಲ್ಲಿ ಬರ ಪರಿಶೀಲನೆ ಮುಕ್ತಾಯವಾಗಿಲ್ಲ. ಹಂತ ಹಂತವಾಗಿ ನಡೆಯುತ್ತಿದೆ. ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಈಗಾಗಲೇ ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿದ್ದು, ಎರಡನೇ ಹಂತದ ಪರಿಶೀಲನೆ ನಡೆಯುತ್ತಿದೆ. 25 ತಾಲ್ಲೂಕುಗಳು ಬರ ಪೀಡಿತ ಪ್ರದೇಶಗಳೆಂದು ಘೋಷಣೆಗೆ ಅರ್ಹತೆ ಪಡೆದಿದ್ದು, ಶೀಘ್ರದಲ್ಲೇ ಘೋಷಣೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.

2ನೇ ಪುಟಕ್ಕೆ...

## ಮುದ್ದೇಬಿಹಾಳ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ



ವಿಜಯಪುರ : ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣ ಪರಿಹಾರ ಒದಗಿಸಬೇಕು. ಸರ್ಕಾರ ಈ ಕುರಿತು ಕೂಡಲೇ ಕ್ರಮ ಕೈಗೊಳ್ಳದಿದ್ದರೆ ರೈತರನ್ನು ಪಕ್ಷಾತೀತವಾಗಿ ಸಂಘಟಿಸಿ ಬೀದಿಗಿಳಿದು ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್. ಪಾಟೀಲ (ನಡಹಳ್ಳಿ) ಎಚ್ಚರಿಸಿದರು.

ಮುದ್ದೇಬಿಹಾಳ ಪಟ್ಟಣದಲ್ಲಿ ಬರ ಘೋಷಣೆಗೆ ಆಗ್ರಹಿಸಿ ತಹಶೀಲ್ದಾರ್ ಕಚೇರಿ ಎದುರು ಸೋಮವಾರದಿಂದ ಆರಂಭಗೊಂಡಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹದಲ್ಲಿ ಮಾತನಾಡಿದ ಅವರು, ಸರ್ಕಾರಕ್ಕೆ ಮಗ್ಗುಲ ಮುಳ್ಳಾಗಿ ಚುಚ್ಚುವ ಕೆಲಸ ಮಾಡಬೇಕು. ರೈತರು ಸ್ವಯಂಪ್ರೇರಿತವಾಗಿ ಧರಣಿಗೆ ಬೆಂಬಲ ನೀಡಿ ಸರ್ಕಾರದ ಗಮನ ಸೆಳೆಯಬೇಕು ಎಂದು ಕರೆ ನೀಡಿದರು. ತಾಲೂಕು ಜನ ಮುಗ್ಧರು, ದೇವರಂತಹವರು. ಇದನ್ನು ಶಾಸಕರು ದುರಪಯೋಗ ಪಡೆಸಿಕೊಳ್ಳುವಂತಹ ಕಾರ್ಯ ಮಾಡಿದ್ದಾರೆಂದು ಕಿಡಿ ಕಾರಿದ ಅವರು ಈಗ ಜನ ಎಚ್ಚೆತ್ತುಕೊಂಡಿದ್ದಾರೆ ರೈತರ ಪರವಾಗಿ ಸರ್ಕಾರಕ್ಕೆ ಚುಚ್ಚುವ ರಾಜ-ಕಾರಣ ಮಾಡುತ್ತೇನೆ. ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಸರ್ಕಾರವನ್ನು ಪ್ರಶ್ನಿಸುತ್ತೇನೆ. ಎಂ.ಬಿ. ಪಾಟೀಲರ ಹೆಸರು ಹೇಳಿಕೊಂಡು ಜವಾಬ್ದಾರಿಯಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ. ನಾಟಕ ಮಾಡುವುದನ್ನು ಬಿಟ್ಟು ಬರ ಘೋಷಣೆ ಮಾಡಿಸಿರಿ ಎಂದ ನಡಹಳ್ಳಿ ಅವರು ಕ್ಷೇತ್ರದ ಜನರು ಕಳೆದ ಹಲವು ವರ್ಷಗಳಿಂದ ಮತ ನೀಡಿ ಶಾಸಕರನ್ನು ಆಯ್ಕೆ ಮಾಡಿ ಕಳುಹಿಸಿದ್ದಾರೆ. ಹೀಗಾಗಿ ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ನೈತಿಕ ಜವಾಬ್ದಾರಿ ಶಾಸಕರ ಮೇಲಿದೆ. ರೈತರ ಪರವಾಗಿ

2ನೇ ಪುಟಕ್ಕೆ...

## ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ಚಿರತೆ ದಾಳಿ



ದಾವಣಗೆರೆ: ತಾಲ್ಲೂಕಿನ ಆನಗೋಡು ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ-48ರಲ್ಲಿ ಅಪಘಾತದಲ್ಲಿ ಗಾಯಗೊಂಡಿದ್ದ ಐದು ವರ್ಷದ ಗಂಡು ಚಿರತೆಯೊಂದು, ರಕ್ಷಣೆಗೆ ಬಂದಿದ್ದ ಅರಣ್ಯ ಇಲಾಖೆಯ ಸಿಬ್ಬಂದಿ ಮೇಲೆ ಮಂಗಳವಾರ ಬೆಳಿಗ್ಗೆ ದಾಳಿ ನಡೆಸಿ ಗಾಯಗೊಳಿಸಿದೆ.

ಸೋಮವಾರ ರಾತ್ರಿ ರಸ್ತೆ ದಾಟುತ್ತಿದ್ದಾಗ ವಾಹನವೊಂದು ಡಿಕ್ಕಿ ಹೊಡೆದಿದ್ದರಿಂದ ಚಿರತೆ ಗಾಯಗೊಂಡು ರಸ್ತೆ ಬದಿಯಲ್ಲಿ ಬಿದ್ದಿತ್ತು. ಈ ಬಗ್ಗೆ ಬೆಳಿಗ್ಗೆ ಮಾಹಿತಿ ಪಡೆದ ಅರಣ್ಯ ಇಲಾಖೆ ಸಿಬ್ಬಂದಿ ಅದನ್ನು ಸುರಕ್ಷಿತವಾಗಿ ಸೆರೆ ಹಿಡಿಯಲು

2ನೇ ಪುಟಕ್ಕೆ...

## ಆನ್‌ಲೈನ್‌ನಲ್ಲೇ ಶಾಸಕರ ಆಸ್ತಿ-ದಾಯಿತ್ವ ವಿವರ ಸಲ್ಲಿಸಲು ಲೋಕಾಯುಕ್ತ ಅವಕಾಶ




ಬೆಂಗಳೂರು : ಹದಿನಾರನೇ ವಿಧಾನಸಭೆಗೆ ಆಯ್ಕೆಯಾಗಿರುವ ಶಾಸಕರು 2025-26ನೇ ಸಾಲಿನ ನಂತರದ ಆರ್ಥಿಕ ವರ್ಷಗಳಲ್ಲಿ ತಮ್ಮ ಹಾಗೂ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ವಿವರಗಳನ್ನು ಕರ್ನಾಟಕ ಲೋಕಾಯುಕ್ತದ ಜಾಲತಾಣದ ಮೂಲಕವೇ ಸಲ್ಲಿಸಬೇಕಾಗಿದೆ.

ಲೋಕಾಯುಕ್ತ ಸಂಸ್ಥೆಯ ಜಾಲತಾಣದ ಮೂಲಕ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ಸಲ್ಲಿಸಿ, ಅದರ ಮಾಹಿತಿಯನ್ನು ವಿಧಾನಸಭೆ ಸಚಿವಾಲಯಕ್ಕೆ ನೀಡಬೇಕು ಎಂದು ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2ನೇ ಪುಟಕ್ಕೆ...

## ಇಷ್ಟದ ಕಾಲೇಜಿಗೆ ಪ್ರವೇಶ ಸಿಗದೆ ವಿದ್ಯಾರ್ಥಿ ಆತ್ಮಹತ್ಯೆ

ಥಾಣೆ : ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ ಶೇ.95.7ರಷ್ಟು ಅಂಕ ಗಳಿಸಿದ್ದ 17 ವರ್ಷದ ವಿದ್ಯಾರ್ಥಿಯೊಬ್ಬ ತಾನು ಬಯಸಿದ್ದ ಕಾಲೇಜಿನಲ್ಲಿ ಪ್ರವೇಶ ಸಿಗದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಮಹಾರಾಷ್ಟ್ರದ ಥಾಣೆ ನಗರದಲ್ಲಿ ನಡೆದಿದೆ.

ವಿದ್ಯಾರ್ಥಿಯ ಕುಟುಂಬ ವಾಸವಾಗಿತ್ತು. ಸೆ.4ರ ಸಂಜೆ ವಿದ್ಯಾರ್ಥಿ ತನ್ನ ಕುಟುಂಬದ ವಾಟ್ಸಪ್ ಗುಂಪಿಗೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಸಂದೇಶ ಕಳುಹಿಸಿದ್ದ. ಕುಟುಂಬದವರು ಮಧ್ಯಪ್ರವೇಶಿಸುವಷ್ಟರಲ್ಲಿ ಆತ ಕಟ್ಟಡದಿಂದ ಕೆಳಗೆ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ವಿದ್ಯಾರ್ಥಿಯ ಸಾವಿನ ಹಿಂದೆ ಯಾವುದೇ ದುರುದ್ದೇಶ ಅಥವಾ ಇತರರ ಕೈವಾಡವಿದೆ ಎಂದು ಕುಟುಂಬದವರು ಶಂಕಿಸಿಲ್ಲ. ಶೈಕ್ಷಣಿಕ ಒತ್ತಡದಿಂದಾಗಿ ಆತ ತೀವ್ರ ನಿರ್ಧಾರ ಕೈಗೊಂಡಿರುವ ಸಾಧ್ಯತೆ ಇದೆ

2ನೇ ಪುಟಕ್ಕೆ...

## ದರ್ಶನ್‌ಗೆ ತಾತ್ಕಾಲಿಕ ರಿಲೀಫ್: ಕೋರ್ಟ್ ಆದೇಶ ರದ್ದು!



ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಹೈಕೋರ್ಟ್‌ನಿಂದ ತಾತ್ಕಾಲಿ ರಿಲೀಫ್ ಸಿಕ್ಕಿದೆ. ಎ14 ಪ್ರದೋಷ್ ಮಾಫಿ ಸಾಕ್ಷಿ ಆದೇಶ ಪ್ರಶ್ನಿಸಿ ದರ್ಶನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್ ಇಂದು ಆದೇಶ ಪ್ರಕಟಿಸಿದೆ. ಪ್ರದೋಷ್ ಮಾಫಿ ಸಾಕ್ಷಿಯನ್ನಾಗಿಸಿದ್ದ 59ನೇ ಸೆಷನ್ಸ್ ಕೋರ್ಟ್ ಆದೇಶವನ್ನು ಹೈಕೋರ್ಟ್ ನ ನ್ಯಾಯಮೂರ್ತಿ ಎಂ.ನಾಪ್ರಸನ್ನ ಅವರ ಪೀಠ

2ನೇ ಪುಟಕ್ಕೆ...

## ಇಂಟರ್‌ನೆಟ್ ಕೈಕೊಟ್ಟಿದ್ದಕ್ಕೆ ಬೇಸರ; ಮಹಿಳೆ ಆತ್ಮಹತ್ಯೆಗೆ ಶರಣು!

ಜೈಪುರ: ಮೊಬೈಲ್‌ನಲ್ಲಿ ರೀಲ್ಸ್ ನೋಡುವ ಚಟಕ್ಕೆ ಒಳಗಾಗಿದ್ದ 52 ವರ್ಷದ ಮಹಿಳೆಯೊಬ್ಬರು ಇಂಟರ್‌ನೆಟ್ ಸಂಪರ್ಕ ಪದೇ ಪದೆ ಕಡಿತಗೊಂಡಿದ್ದರಿಂದ ಬೇಸರಗೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಲಾಗಿದೆ.

ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯಲ್ಲಿ ಈ ಘಟನೆ ನಡೆದಿದ್ದು, ಮೃತ ಮಹಿಳೆಯನ್ನು ಕೇರಕಚ್ಛಾರ್ ಗ್ರಾಮದ ನಿವಾಸಿ ಮಂಗ್ಲೋ ಬಾಯಿ ಸಾರಥಿ ಎಂದು ಗುರುತಿಸಲಾಗಿದೆ. ಶನಿವಾರ ತಮ್ಮ ಮನೆಯಲ್ಲಿ ಕೀಟನಾಶಕ ಸೇವಿಸಿದ್ದ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಅವರು ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಕುಟುಂಬದವರ ಪ್ರಕಾರ, ಸಾರಥಿ ಮೊಬೈಲ್‌ನಲ್ಲಿ ರೀಲ್ಸ್ ನೋಡುವುದಕ್ಕೆ ಹೆಚ್ಚು ಸಮಯ ಕಳೆಯುತ್ತಿದ್ದರು. ಶನಿವಾರ

2ನೇ ಪುಟಕ್ಕೆ...

### ಕಾಂಗ್ರೆಸ್ 10 ವರ್ಷದಲ್ಲಿ 50 ಸಾವಿರ ಶೌಚಾಲಯವೂ ಕಟ್ಟಲಿಲ್ಲ,

# ಪ್ರಧಾನಿ ಮೋದಿ ವಾಗ್ದಾಳಿ

ಆದರೆ, ನಾವು 50 ಸಾವಿರ ಆಧುನಿಕ ರೈಲು ಬೋಗಿಗಳನ್ನು ನಿರ್ಮಿಸಿದ್ದೇವೆ ಎಂದು ಹೇಳಿದ್ದಾರೆ.

2014ರ ಬಳಿಕ ಭಾರತದಲ್ಲಿ 50,000 ಆಧುನಿಕ ರೈಲು ಬೋಗಿಗಳನ್ನು ನಿರ್ಮಿಸಲಾಗಿದೆ. ಹಿಂದಿನ ಕಾಂಗ್ರೆಸ್ ಸರ್ಕಾರ 10 ವರ್ಷಗಳಲ್ಲಿ 50,000 ಶೌಚಾಲಯಗಳನ್ನೂ ನಿರ್ಮಿಸಲು ಸಾಧ್ಯವಾಗಲಿಲ್ಲ ಎಂದು ಟೀಕಿಸಿದರು.

ಸಮರ್ಪಿತ ಸರಕು ಸಾಗಣೆ ಮಾರ್ಗಗಳು ವೇಗವಾಗಿ ಅಭಿವೃದ್ಧಿಯಾಗುತ್ತಿರುವ ಭಾರತದ ಜೀವನಾಡಿ. ಆಧುನಿಕ ಸರಕು ಸಾಗಣೆ ಜಾಲದಿಂದ ಭಾರತದ ಪರಿವರ್ತನೆಯ ವೇಗ ಹೆಚ್ಚಾಗಿದೆ.

ಈ ಹಿಂದೆ ಪ್ರಯಾಣಿಕ ರೈಲುಗಳು ಮತ್ತು ಸರಕು ರೈಲುಗಳು ಒಂದೇ ಹಳಿಯಲ್ಲಿ ಸಂಚರಿಸಬೇಕಾಗಿತ್ತು. ಇದರಿಂದ ಪ್ರಯಾಣಿಕರ ಸಂಚಾರ ಮತ್ತು ಸರಕು ಸಾಗಣೆ ಎರಡೂ ನಿಧಾನವಾಗುತ್ತಿತ್ತು. ಆದರೆ, ಸಮರ್ಪಿತ ಸರಕು ಸಾಗಣೆ ಮಾರ್ಗ ಈ ಸಮಸ್ಯೆಯನ್ನು ಬದಲಾಯಿಸಿದೆ ಎಂದು ಹೇಳಿದರು.

ಈಗ ನಾರಾಜ್ ಪೂಫಾ' ಅವರು ಟ್ರಕ್ ಚಾಲಕರಿಗೆ ಏನಾಗುತ್ತದೆ ಎಂದು ಕೂಗುತ್ತಾ-ರೆ. ಪೂಫಾಗೆ ಈಗ ಕೆಲಸ ಸಿಕ್ಕಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೆಸರನ್ನು ನೇರವಾಗಿ ಉಲ್ಲೇಖಿಸದೆ ವ್ಯಂಗ್ಯವಾಡಿದರು.

2014ರ ಬಳಿಕ ನಿಮ್ಮ ಆಶೀರ್ವಾದದಿಂದ ನಾನು ದೆಹಲಿಗೆ ಬಂದಾಗ, ಅಲ್ಲಿಗೆ ತಲುಪಿದ ಕೂಡಲೇ ಈ ಯೋಜನೆಯ ಕಾಮಗಾರಿಗೆ ವೇಗ ನೀಡಲು ಆರಂಭಿಸಿದ್ದೆವು. ಇಂದು ಸಮರ್ಪಿತ ಸರಕು ಸಾಗಣೆ ಮಾರ್ಗಗಳ ಕಾಮಗಾರಿ ಪೂರ್ಣಗೊಂಡಿದೆ. ಇಂದು ಪೂರ್ವ ಮತ್ತು ಪಶ್ಚಿಮ ಸಮರ್ಪಿತ ಸರಕು ಸಾಗಣೆ ಮಾರ್ಗಗಳು ದೇಶದ ವ್ಯಾಪಾರ ಮತ್ತು ವಾಣಿಜ್ಯದ ಪ್ರಮುಖ ಬೆನ್ನೆಲುಬಾಗಿ ರೂಪುಗೊಳ್ಳುತ್ತಿವೆ.

ಸುಮಾರು 2,800 ಕಿ.ಮೀ ಉದ್ದದ ಸಮರ್ಪಿತ ಸರಕು ಸಾಗಣೆ ಮಾರ್ಗ ಕಳೆದ 12 ವರ್ಷಗಳಲ್ಲಿ ದೇಶದ ಕಾರ್ಯಸಂಸ್ಕೃತಿಯಲ್ಲಿ ಆಗಿರುವ ಬದಲಾವಣೆಗೆ ಸಾಕ್ಷಿಯಾಗಿದೆ. ಈ ಸಮರ್ಪಿತ ಸರಕು ಸಾಗಣೆ ಮಾರ್ಗದ ಕಲ್ಪನೆ 2004ರಲ್ಲಿ ಆರಂಭವಾಯಿತು. 2006ರಲ್ಲಿ ಕಾಮಗಾರಿ ಕೈಗೊಳ್ಳಲು ವಿಶೇಷ ಕಂಪನಿ ಸ್ಥಾಪಿಸಲಾಯಿತು. ಆದರೆ. 2014ರವರೆಗೆ ಕಡತಗಳು ಒಂದು ಕಚೇರಿಯಿಂದ ಮತ್ತೊಂದು ಕಚೇರಿಗೆ ಓಡಾಡುತ್ತಲೇ ಇದ್ದವು.

ದುರದೃಷ್ಟವಶಾತ್, ಆ ಕಡತಗಳಿಗೂ ಸಮರ್ಪಿತ ಮಾರ್ಗದ ಭಾಗ್ಯ ಇರಲಿಲ್ಲ. ಕಡತಗಳು ಒಂದೆಡೆ ಸಿಲುಕಿಕೊಂಡು, ಮತ್ತೊಂದೆಡೆ ನೇತಾಡುತ್ತಾ, ದಿಕ್ಕಿಲ್ಲದೆ ಅಲೆದಾಡುತ್ತಿದ್ದವು ಎಂದು ಹಿಂದಿನ ಸರ್ಕಾರವನ್ನು ಟೀಕಿಸಿದರು.

# ಆತಂಕ ಬೇಡ, ಇನ್ನೂ 25 ತಾಲ್ಲೂಕು ಬರಪೀಡಿತ ಪ್ರದೇಶಗಳೆಂದು ಶೀಘ್ರ ಘೋಷಣೆ: ಡಿಸಿಎಂ ಪರಮೇಶ್ವರ

ಜಿ. ಪರಮೇಶ್ವರ ಅವರು ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬರ ಪೀಡಿತ ಪ್ರದೇಶಗಳ ಘೋಷಣೆ ಪ್ರಕ್ರಿಯೆ ವಿಳಂಬವಾಗಿಲ್ಲ. ಮುಂಗಾರು ಹಾಗೂ ಹಿಂಗಾರು ಕಡಿಮೆ ಆಗುವವರೆಗೂ ಪರಿಶೀಲನೆ ಮುಂದುವರಿಯುತ್ತದೆ. ಕಳೆದ ಬಾರಿ ಸುಮಾರು 200 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿತ್ತು. ಈ ಬಾರಿಯೂ 200ಕ್ಕೂ ಹೆಚ್ಚು ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಿಸಲ್ಪಡುವ ಪರಿಸ್ಥಿತಿ ಇದೆ. ಕರಾವಳಿ ಪ್ರದೇಶವನ್ನು ಹೊರತುಪಡಿಸಿ ಉಳಿದೆಲ್ಲೆಡೆ ಬರ ಪರಿಸ್ಥಿತಿ ಇದೆ ಎಂದರು. ಕೆಲವು ಶಾಸಕರು ತಮ್ಮ ತಾಲ್ಲೂಕುಗಳನ್ನು ಬೇಕೆಂದೇ ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಿಲ್ಲ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಪರಮೇಶ್ವರ ಅವರು, ತೀವ್ರ ಬರ ಇದ್ದರೂ ತಮ್ಮ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿಲ್ಲ ಎಂದು ಯಾರೂ ಆತಂಕಪಡುವ ಅಗತ್ಯವಿಲ್ಲ. ಇಡೀ ರಾಜ್ಯವೇ ಇಂದು ಬರಗಾಲವನ್ನು ಎದುರಿಸುತ್ತಿದೆ. ಬರಪೀಡಿತ ಪ್ರದೇಶಗಳೆಂದು ಘೋಷಿಸುವ ವಿಚಾರದಲ್ಲಿ ರಾಜ್ಯ ಸರ್ಕಾರದ ಯಾರೊಬ್ಬರ ಪಾತ್ರವೂ ಇಲ್ಲ. ಬೇ-ಕೆಂದೆ ಕೆಲವು ತಾಲ್ಲೂಕುಗಳನ್ನು ಕೈಬಿಟ್ಟಿದ್ದಾರೆ ಎಂಬುದು ಆಧಾರ ರಹಿತ ಆರೋಪವಾಗಿದೆ. ಪಕ್ಷ ನೋಡಿಕೊಂಡು ಬರ ಸಂಭವಿಸಿಲ್ಲ. ಈಗಾಗಲೇ ಘೋಷಿತ ಪಟ್ಟಿಯಲ್ಲಿ ವಿರೋಧ ಪಕ್ಷದ ಶಾಸಕರಿರುವ ತಾಲ್ಲೂಕುಗಳೂ ಇವೆಯಲ್ಲವೇ? ಎಂದು ಪ್ರಶ್ನಿಸಿದರು. ರಾಜ್ಯ ಸರ್ಕಾರವೇ ತನ್ನ ಪಾಡಿಗೆ ತಾನು ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಿದರೆ ಕೇಂದ್ರದಿಂದ ನೆರವು ಪಡೆಯಲು ಸಾಧ್ಯವಾಗುವುದಿಲ್ಲ. ಕೇಂದ್ರದ ಬರಪರಿಹಾರ ಪಡೆಯಲು ನಾವು ಸಹನೆಯಿಂದ ವರ್ತಿಸಿದಷ್ಟೂ ಉತ್ತಮ. ಕೇಂದ್ರ ಸರ್ಕಾರದ ನಿಯಮಗಳಡಿ ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಲಾಗುತ್ತದೆಯೇ ವಿನಃ ರಾಜ್ಯ ಸರ್ಕಾರವೇ ಸ್ವಂತ ನಿರ್ಧಾರಗಳನ್ನು ತೆಗೆದುಕೊಂಡು ಘೋಷಣೆ ಮಾಡಲು ಸಾಧ್ಯವಿಲ್ಲ. ಉಪಗ್ರಹ ಆಧಾರಿತ ಚಿತ್ರಗಳನ್ನು ಪರಿಶೀಲಿಸಿ, ಗ್ರೌಂಡ್ ಟ್ರುಥಿಂಗ್ ಮಾಡಿ, ವೈಜ್ಞಾನಿಕ ಅಧ್ಯಯನದ ಬಳಿಕ ಘೋಷಣೆ ಮಾಡುತ್ತಾರೆ. ಇದನ್ನು ನಾನು ಅಧಿವೇಶನದ ವೇಳೆಯೇ ಸ್ಪಷ್ಟವಾಗಿ ಹೇಳಿದ್ದೇನೆ ಎಂದು ಪರಮೇಶ್ವರ ಅವರು ಒತ್ತಿ ಹೇಳಿದರು. ನೈಸ್ ವಿಚಾರವಾಗಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ರಕ್ಕೆ ಸಂಬಂಧಿಸಿ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ ಅವರು, ಭೂಮಿ ಕಳೆದುಕೊಳ್ಳುವವರಿಗಿಂತ ಸಚಿವ ಸಂಪುಟದಲ್ಲಿರುವಂತಹ ಅನೇಕ ಸಚಿವರು ಅದರ ಲಾಭ ಪಡೆಯುತ್ತಿದ್ದಾರೆ ಎಂದು ಆರೋಪ ಆಧಾರ ರಹಿತವಾಗಿದೆ ಎಂದರು.

ರಾಜ್ಯ ಸರ್ಕಾರವು ಸುಪ್ರೀಂ ಕೋರ್ಟ್‌ನ ಆದೇಶಕ್ಕೆ ಅನುಗುಣವಾಗಿ ಮಾನವೀಯತೆ ದೃಷ್ಟಿಯಿಂದ ಈ ತೀರ್ಮಾನ ತೆಗೆದುಕೊಂಡಿದೆ. ನೂರಾರು ಕೋಟಿ ಬೆಲೆಬಾಳುವ ಭೂಮಿಯನ್ನು ಕೆಲವು ಲಕ್ಷಗಳಿಗೆ ಬಿಟ್ಟುಕೊಟ್ಟ ರೈತರಿಗೆ ಅನ್ಯಾಯವಾಗದಿರಲು 1453 ನಿವೇಶಗಳನ್ನು ಹಂಚಿಕೆ ಮಾಡುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ವಿಚಾರದಲ್ಲಿ ಯಾರಿಗೂ ವೈಯಕ್ತಿಕ ಲಾಭ ಮಾಡಿಕೊಡುವ ಉದ್ದೇಶವಿಲ್ಲ ಎಂದು ಸ್ಪಷ್ಟಪಡಿಸಿದರು.

# ಕೊನೆಗೂ ಬಿಜೆಪಿ ಸಮಾವೇಶಕ್ಕೆ ಅನುಮತಿ ಕೊಟ್ಟ ಬಳ್ಳಾರಿ ಜಿಲ್ಲಾಡಳಿತ

ಕಳೆದ ಒಂದು ವಾರದಿಂದ ಮೈದಾನವನ್ನು ಸಮಾವೇಶಕ್ಕೆ ನೀಡಲು ಅನುಮತಿ ನೀಡಿರಲಿಲ್ಲ. ಇದರಿಂದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರಲ್ಲಿ ಅಸಮಾಧಾನ ಉಂಟಾಗಿ-ತ್ತು. ಮೈದಾನ ಬಳಕೆಗೆ ಅನುಮತಿ ನೀಡದಿರುವ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದರು. ಶಾಸಕ ಜನಾರ್ದನ ರೆಡ್ಡಿ ನೇತೃತ್ವದಲ್ಲಿ ಬಿಜೆಪಿ ಮುಖಂಡರು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರನ್ನು ಭೇಟಿ ಮಾಡಿ, ಸಮಾರೋಪ ಸಮಾರಂಭಕ್ಕೆ ಮೈದಾನ ನೀಡುವಂತೆ ಮನವಿ ಮಾಡಿದರು. ಈ ವೇಳೆ ಕಾರ್ಯಕ್ರಮದ ಸಿದ್ಧತೆ ಹಾಗೂ ಮೈದಾನದ ಅಗತ್ಯತೆಯ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಯಿತು. ಸಭೆಯ ಸಂದರ್ಭದಲ್ಲಿ ಮೈದಾನ ಬಳಕೆಗೆ ಅನುಮತಿ ನೀಡದಿರುವ ಬಗ್ಗೆ ಬಿಜೆಪಿ ನಾಯಕರಿಂದ ತೀವ್ರ ಆಕ್ರೋಶ ವ್ಯಕ್ತವಾಯಿತು. ಪಾದಯಾತ್ರೆಯ ಸಮಾರೋಪ ಕಾರ್ಯಕ್ರಮಕ್ಕೆ ಸೂಕ್ತ ಸ್ಥಳದ ಅಗತ್ಯವಿದ್ದು, ಈಗಾಗಲೇ ಪಕ್ಷದ ವತಿಯಿಂದ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ನಾಯಕರು ಜಿಲ್ಲಾಡಳಿತದ ಗಮನಕ್ಕೆ ತಂದರು. ಈ ಹಿನ್ನೆಲೆಯಲ್ಲಿ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಅಧಿಕಾರಿಗಳ ಮಟ್ಟದಲ್ಲಿ ಚರ್ಚೆ ನಡೆಯಿತು.

ಬಿಜೆಪಿ ನಾಯಕರ ಆಕ್ರೋಶ ಹಾಗೂ ಮನವಿಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸೂಚನೆ ಮೇರೆಗೆ ಬಳ್ಳಾರಿ ಜಿಲ್ಲಾಡಳಿತ ಅಂತಿಮವಾಗಿ ಷರತ್ತುಬದ್ಧ ಅನುಮತಿ ನೀಡಿದೆ. ಅನುಮತಿ ದೊರೆತಿರುವುದರಿಂದ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಲ್ಲಿ ಸಂತಸ ವ್ಯಕ್ತವಾಗಿದ್ದು, ಸಮಾರೋಪ ಸಮಾರಂಭದ ಸಿದ್ಧತೆಗಳಿಗೆ ಮತ್ತಷ್ಟು ವೇಗ ದೊರೆತಿದೆ. ಇದೀಗ ಸೆಪ್ಟೆಂಬರ್ 10ರಂದು ನಡೆಯಲಿರುವ 'ಬಳ್ಳಾರಿ ಚಲೋ' ಸಮಾರೋಪ ಸಮಾರಂಭದತ್ತ ರಾಜಕೀಯ ವಲಯದ ಗಮನ ಹರಿದಿದೆ. ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ನಾಯಕರು ಹಾಗೂ ಸ್ಥಳೀಯ ಮುಖಂಡರು ಭಾಗವಹಿಸಲಿದ್ದು, ಪಾದಯಾತ್ರೆಯ ಸಮಾರೋಪವನ್ನು ಬೃಹತ್ ಕಾರ್ಯಕ್ರಮವಾಗಿ ನಡೆಸಲು ಪಕ್ಷದ ವತಿಯಿಂದ ಸಿದ್ಧತೆ ಮುಂದುವರಿದಿದೆ.

# ಮುದ್ದೇಬಿಹಾಳ ಕ್ಷೇತ್ರವನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

ಸರ್ಕಾರದ ಮೇಲೆ ಒತ್ತಡ ತರಬೇಕು.

ವಿಜಯಪುರ ಜಿಲ್ಲೆಯಲ್ಲಿ ಆಡಳಿತ ಪಕ್ಷದ ಆರು ಶಾಸಕರಿದ್ದು, ಜಿಲ್ಲಾ ಉಸ್ತುವಾರಿ ಸಚಿವರಿಗೂ ಜಿಲ್ಲೆಯ ಬರ ಪರಿಸ್ಥಿತಿಯ ಬಗ್ಗೆ ಸರ್ಕಾರದ ಗಮನ ಸೆಳೆಯುವ ಜವಾಬ್ದಾರಿ ಇದೆ. ಒಂದೇ ಪಕ್ಷದ ಸರ್ಕಾರವಿರುವುದರಿಂದ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಜಿಲ್ಲೆಯ ವಾಸ್ತವ ಬರ ಪರಿಸ್ಥಿತಿಯನ್ನು ಮನವರಿಕೆ ಮಾಡಿಕೊಡಬೇಕಿತ್ತು. ಆದರೆ ಈ ನಿಟ್ಟಿನಲ್ಲಿ ಇದುವರೆಗೆ ಪರಿಣಾಮಕಾರಿ ಪ್ರಯತ್ನ ನಡೆದಿಲ್ಲ ಎಂದು ಅವರು ಆರೋಪಿಸಿದರು.

ಮುಖ್ಯಮಂತ್ರಿಗಳು ಸೂಚನೆ ನೀಡಿದ್ದರೂ ಜಿಲ್ಲಾ ಉಸ್ತುವಾರಿ ಸಚಿವರು ಕ್ಷೇತ್ರಕ್ಕೆ ಭೇಟಿ ನೀಡಿಲ್ಲ. ಬೆಳೆಹಾನಿ ಹಾಗೂ ಮಳೆಕೊರತೆಯ ವಾಸ್ತವ ಪರಿಸ್ಥಿತಿಯ ಸಮೀಕ್ಷೆ ನಡೆಸಬೇಕಿತ್ತು. ಸಮಗ್ರ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದರೆ ರೈತರು ಹೋರಾಟಕ್ಕೆ ಇಳಿಯುವ ಪರಿಸ್ಥಿತಿ ನಿರ್ಮಾಣವಾಗುತ್ತಿರಲಿಲ್ಲ ಎಂದು ನಡಹಳ್ಳಿ ಹೇಳಿದರು.

ರೈತರಿಗೆ 25 ಸಾವಿರ ಪರಿಹಾರ ನೀಡಲಿ

ರಾಜ್ಯದಲ್ಲಿ ಬರಪೀಡಿತ ತಾಲೂಕಿನ 79 ಲಕ್ಷ ರೈತರಿಗೆ ತಲಾ 25 ಸಾವಿರ ಪರಿಹಾರ ನೀಡಬೇಕು. ಮಳೆಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರ ಸಂಕಷ್ಟಕ್ಕೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ನಡಹಳ್ಳಿ ಆಗ್ರಹಿಸಿದರು. ಇಂಡಿ, ದೇವರಹಿಪ್ಪರಗಿ ಹಾಗೂ ತಾಳಿಕೋಟಿ ಭಾಗಗಳಲ್ಲಿ ರೈತ ಸಂಘಟನೆಗಳ ನೇತೃತ್ವದಲ್ಲಿ ಬರ ಘೋಷಣೆಗೆ ಆಗ್ರಹಿಸಿ ಹೋರಾಟ ನಡೆ-ಯುತ್ತಿದೆ. ಅದೇ ರೀತಿಯಲ್ಲಿ ಮುದ್ದೇಬಿಹಾಳ ಕ್ಷೇತ್ರದ ರೈತರೂ ಪಕ್ಷಾತೀತವಾಗಿ ಒಂದಾಗಿ ಹೋರಾಟಕ್ಕೆ ಮುಂದಾಗಿ ಸರ್ಕಾರವನ್ನು ಎಚ್ಚರಿಸಬೇಕು ಎಂದು ಅವರು ಕರೆ ನೀಡಿದರು.

ಸರ್ಕಾರ ಹಾಗೂ ಜನಪ್ರತಿನಿಧಿಗಳು ರೈತರ ಸಂಕಷ್ಟವನ್ನು ರಾಜಕೀಯ ಪ್ರತಿಷ್ಠೆಯಾಗಿ ಪರಿಗಣಿಸದೆ, ವಾಸ್ತವ ಪರಿಸ್ಥಿತಿಯನ್ನು ಅರಿತು ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರೈತರ ಹೋರಾಟವನ್ನು ಇನ್ನಷ್ಟು ಸಂಘಟಿತವಾಗಿ ಮುಂದುವರಿಸಲಾಗುವುದು ಎಂದು ಅವರು ಎಚ್ಚರಿಸಿದರು.

ಧರಣಿಯಲ್ಲಿ ಮುಖಂಡರಾದ ಹೇಮರಡ್ಡಿ ಮೇಟಿ, ಮಲಕೇಂದ್ರಗೌಡ ಪಾಟೀಲ, ಗುರುನಾಥಗೌಡ ಬಿರಾದಾರ, ಸೋಮನಗೌಡ ಬಿರಾದಾರ, ವೆಂಕನಗೌಡ ಪಾಟೀಲ, ಜಗದೀಶ ಪಂಪಣ್ಣವರ, ಬಸವರಾಜ ಚಿತ್ತರಗಿ, ಲಕ್ಷ್ಮಣ ಬಿಜ್ಜೂರ, ಸಂಗಮೇಶ ಹತ್ತಿ, ಶಂಕರಗೌಡ ಶಿವಣಗಿ, ಪ್ರಭು ಕಡಿ, ಕೆಂಚೆಪ್ಪ ಬಿರಾದಾರ, ಡಾ.ವೀರೇಶ ಪಾಟೀಲ, ಹಣಮಂತ ನಾಯಕಮಕ್ಕಳ, ಸಂಗಣ್ಣ ಹತ್ತಿ, ಗೀರಿಶಗೌಡ ಪಾಟೀಲ(ಮುರಾಳ), ಶಂಕರಗೌಡ ಶಿವಣಗಿ, ಸುಭಾಸ ಕಾಳಗಿ, ರೇಖಾ ಕೊಂಡಗೂಳಿ, ಗೌರಮ್ಮ ಹುನಗುಂದ, ಶಿವು ಕನ್ನೊಳ್ಳಿ, ಹರೀಶ ನಾಟೀಕಾರ, ನಾಗೇಶ ಕವಡಿಮಟ್ಟಿ, ಮಸೂತಿ, ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

# ದಾವಣಗೆರೆ: ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ಚಿರತೆ ದಾಳಿ

ಮುಂದಾಗಿದ್ದರು. ಈ ಸಂದರ್ಭ ನರಳಾಡುತ್ತಿದ್ದ ಚಿರತೆ-ಯು ಕುಟುಂತ್ತಲೇ ನುಗ್ಗಿ ಬಂದು ಅರಣ್ಯ ಇಲಾಖೆಯ ನೌಕರ ಮರುಳಸಿದ್ದಪ್ಪ ಅವರ ಮೇಲೆ ಎರಗಿ ಕಚ್ಚಿ ಗಾಯಗೊಳಿಸಿದೆ. ಕೂಡಲೇ ಸ್ಥಳದಲ್ಲಿದ್ದ ಸಿಬ್ಬಂದಿ ಅವರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದರು.ಬಳಿಕ ವಿಜಯನಗರ ಜಿಲ್ಲೆ ಹೊಸಪೇಟೆಯಿಂದ ಬಂದಿದ್ದ ಸಿಬ್ಬಂದಿ ಚಿರತೆಗೆ ಅರಿವಳಿಕೆ ಚುಚ್ಚುಮದ್ದು ನೀಡಿದರು. ಪ್ರಜ್ಞೆ ತಪ್ಪಿದ ಬಳಿಕ ಚಿರತೆಗೆ ಪ್ರಾಥಮಿಕ ಚಿಕಿತ್ಸೆ ನೀಡಲಾಯಿತು. ಹಂಪಿ ಸಮೀಪದ ಅಟಲ್ ಬಿಹಾರಿ ವಾಜಪೇಯಿ ಮೃಗಾಲಯಕ್ಕೆ (ಹಂಪಿ ಮೃಗಾಲಯ) ರವಾನಿಸಲಾಯಿತು. 'ಅಪಘಾತದಿಂದಾಗಿ ಚಿರತೆಯ ಬೆನ್ನು ಮೂಳೆಗೆ ಪೆಟ್ಟು ಬಿದ್ದಿದೆ. ಆಕ್ರಮಣಕಾರಿಯಾಗಿದ್ದ ಚಿರತೆಯು ಜನರ ಕೂಗಾಟದ ಕಾರಣಕ್ಕೆ ಏಕಾಏಕಿ ದಾಳಿ ನಡೆಸಿತು.

# 'ರೀಲ್ಸ್' ಗೀಳು; ಇಂಟರ್‌ನೆಟ್ ಕೈಕೊಟ್ಟದ್ದಕ್ಕೆ ಬೇಸರ; ಮಹಿಳೆ ಆತ್ಮಹತ್ಯೆಗೆ ಶರಣು!

ರೀಲ್ಸ್ ವೀಕ್ಷಿಸುತ್ತಿದ್ದ ವೇಳೆ ಪದೇ ಪದೆ ಮೊಬೈಲ್ ನೆಟ್‌ವರ್ಕ್ ಕೈಕೊಟ್ಟಿದೆ. ಇದರಿಂದ ವೀಡಿಯೊಗಳು ಪದೇ ಪದೆ ನಿಂತುಹೋಗಿದ್ದರಿಂದ ಅವರು ತೀವ್ರವಾಗಿ ಬೇಸರಗೊಂಡಿದ್ದರು ಎನ್ನಲಾಗಿದೆ.

ನೆಟ್‌ವರ್ಕ್ ಸಮಸ್ಯೆಯಿಂದ ಕೋಪಗೊಂಡ ಸಾರಥಿ ತಮ್ಮ ಮೊಬೈಲ್ ಫೋನ್ ಅನ್ನು ನೆಲಕ್ಕೆ ಎಸೆದಿದ್ದು, ಇದರಿಂದ ಮೊಬೈಲ್ ಹಾನಿಗೊಳಗಾಗಿದೆ. ಇದಾದ ಬಳಿಕ ಮನೆಯಲ್ಲಿ ಇರಿಸಲಾಗಿದ್ದ ಕೀಟನಾಶಕವನ್ನು ಅವರು ಸೇವಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಾರಥಿ ಅವರ ಆರೋಗ್ಯ ಸ್ಥಿತಿ ಹದಗೆಡುತ್ತಿರುವುದನ್ನು ಅವರ 17 ವರ್ಷದ ಪುತ್ರಿ ಗಮನಿಸಿ ಕುಟುಂಬದ ಇತರ ಸದಸ್ಯರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಅವರನ್ನು ಕಾರ್ತಲಾ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಯಿತು.

# ವಿದ್ಯಾರ್ಥಿ ಆತ್ಮಹತ್ಯೆ

ಎಂದು ಕುಟುಂಬದವರು ತಿಳಿಸಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

ಇತ್ತೀಚೆಗೆ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ ಶೇ.95.7ರಷ್ಟು ಅಂಕ ಗಳಿಸಿದ್ದ ವಿದ್ಯಾರ್ಥಿ, ಕೊಲ್ಕತ್ತಾದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಸೈನ್ಸ್ ಅಂಡ್ ಟೆಕ್ನಾಲಜಿ, ಶಿಬ್‌ಪುರದಲ್ಲಿ ಬಿಎಸ್-ಎಂಎಸ್ ದ್ವಿಪದವಿ ಪಡೆಯುವ ಆಸೆ ಹೊಂದಿದ್ದ. ಆದರೆ, ಸಂಸ್ಥೆಯ ಪ್ರವೇಶ ಪರೀಕ್ಷೆಯಲ್ಲಿ 10,474ನೇ ರ್ಯಾಂಕ್ ಪಡೆದಿದ್ದರಿಂದ ಪ್ರವೇಶ ಪಡೆಯಲು ಸಾಧ್ಯವಾಗಿರಲಿಲ್ಲ. ಪ್ರತಿಷ್ಠಿತ ಸಂಸ್ಥೆಯಲ್ಲಿ ಸೀಟು ದೊರೆಯದಿರುವುದು ಆತನ ನಿರಾಸೆಯನ್ನು ಮತ್ತಷ್ಟು ಹೆಚ್ಚಿಸಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಸೆ.4ರಂದು ಸಂಜೆ ಸುಮಾರು 7.30ಕ್ಕೆ ಸೈಕ್ಲಿಂಗ್‌ಗೆ ತೆರಳುವುದಾಗಿ ಕುಟುಂಬದವರಿಗೆ ತಿಳಿಸಿ ವಿದ್ಯಾರ್ಥಿ ಮನೆಯಿಂದ ಹೊರಟಿದ್ದ. ರಾತ್ರಿ 8.15ರ ಸುಮಾರಿಗೆ ಕುಟುಂಬದ ವಾಟ್ಸ್‌ಪ್ ಗುಂಪಿಗೆ ಆತ್ಮಹತ್ಯೆ ಮಾಡಿಕೊಳ್ಳುವ ಉದ್ದೇಶದ ಸಂದೇಶ ಕಳುಹಿಸಿದ್ದಾನೆ. ಸಂದೇಶ ಗಮನಿಸಿದ ಕುಟುಂಬದವರು ಆತನ ಮೊಬೈಲ್ ಸ್ವಿಚ್ ಆಫ್ ಆಗಿರುವುದನ್ನು ಗಮನಿಸಿ ಕೂಡಲೇ ಕಾಸರ್‌ವಡವಲಿ ಪೊಲೀಸರಿಗೆ ಮಾಹಿತಿ ನೀಡಿ-ದ್ದರು. ಪೊಲೀಸರು ಹಾಗೂ ಕುಟುಂಬದವರು ಹುಡುಕಾಟ ನಡೆಸಿದಾಗ, ಅಪಾರ್ಟ್‌ಮೆಂಟ್ ಸಮೀಪ ವಿದ್ಯಾರ್ಥಿ ಗಂಭೀರವಾಗಿ ಗಾಯಗ-ೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದ. ತಕ್ಷಣ ಥಾಣೆ ಸಿವಿಲ್ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ, ಆತ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದರು. ಮೃತ ವಿದ್ಯಾರ್ಥಿಯ ತಂದೆ ನೀಡಿದ ಹೇಳಿಕೆಯ ಆಧಾರದ ಮೇಲೆ ಪೊಲೀಸರು ಆಕಸ್ಮಿಕ ಸಾವು ವರದಿ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

# ಕರ್ನಾಟಕಕ್ಕೆ ಮತ್ತೆ ಶಾಕ್:

ನವದೆಹಲಿ: ಕಾವೇರಿ ಜಲ ನಿಯಂತ್ರಣ ಸಮಿತಿಯು ಇಂದು ಮಂಗಳವಾರ, ತಮಿಳುನಾಡಿಗೆ ಇನ್ನೂ 15 ದಿನಗಳ ಕಾಲ ಪ್ರತಿದಿನ 6,000 ಕ್ಯೂಸೆಕ್ ಕಾವೇರಿ ನೀರನ್ನು ಹರಿಸುವಂತೆ ಸೂಚಿಸಿದೆ. ವಿನೀತ್ ಗುಪ್ತ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಆದೇಶ ಹೊರಡಿಸಲಾಗಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿನ ಮಳೆ ಹಾಗೂ ಬೆಳೆ ಪರಿಸ್ಥಿತಿಯನ್ನು ಸಮಿತಿ ಪರಿಶೀಲಿಸಿತು. ನಾಳೆ ಬೆಳಗ್ಗೆ 8 ಗಂಟೆಯಿಂದ ಮುಂದಿನ 15 ದಿನಗಳ ಕಾಲ ಬಿಳಿಗುಂಡ್ಲುವಿನಲ್ಲಿ 6,000 ಕ್ಯೂಸೆಕ್ ನೀರಿನ ಹರಿವು ಖಚಿತವಾಗುವಂತೆ ಕರ್ನಾಟಕ ತನ್ನ ಜಲಾಶಯಗಳಿಂದ ನೀರು ಬಿಡುಗಡೆ ಮಾಡಬೇಕು ಎಂದು ಸೂಚಿಸಿದೆ.

# ಹಾಡಹಗಲೇ ರೌಡಿಶೀಟರ್ ಬರ್ಬರ ಹತ್ಯೆ

ವಿಜಯಪುರ: ಜಿಲ್ಲೆಯ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ಹಾಡಹಗಲೇ ರೌಡಿಶೀಟರ್ ಕೊಲೆಯಾಗಿದೆ. ಸುಖದೇವ್ ಭಂಡಾರಿ (32) ಕೊಲೆಯಾದ ರೌಡಿಶೀಟರ್ ಎಂದು ತಿಳಿದುಬಂದಿದೆ. ಹಳೆ ವೈಷಮ್ಯಕ್ಕೆ ರೌಡಿಶೀಟರ್‌ನನ್ನು ಬರ್ಬರವಾಗಿ ಹತ್ಯೆಗೈದಿರುವ ಶಂಕೆ ವ್ಯಕ್ತವಾಗಿದೆ. ಕೊಲೆಗೈದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ. ಸದ್ಯ ಸ್ಥಳಕ್ಕೆ ಇಂಡಿ ಗ್ರಾಮೀಣ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಇಂಡಿ ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ದರ್ಶನ್‌ಗೆ ತಾತ್ಕಾಲಿಕ ರಿಲೀಫ್: ಕೋರ್ಟ್ ಆದೇಶ ರದ್ದು!

ರದ್ದುಪಡಿಸಿದೆ.

59ನೇ ಸೆಷನ್ಸ್ ಕೋರ್ಟ್ ಪ್ರದೋಷ್‌ಗೆ ಮಾಫಿ ಸಾಕ್ಷಿ ಆಗಲು ಅನುಮತಿ ನೀಡಿತ್ತು. ಆದರೆ ಪ್ರಕರಣದ ಎರಡನೇ ಆರೋಪಿ ದರ್ಶನ್ ಇದಕ್ಕೆ ವಿರೋಧ ವ್ಯಕ್ತಪಡಿಸಿ, ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ನಿನ್ನೆ ಈ ಕುರಿತು ವಿಚಾರಣೆ ನಡೆದು, ಆದೇಶವನ್ನು ಕಾಯ್ದಿಸಿದ್ದ ಹೈಕೋರ್ಟ್ ಇಂದು ಆದೇಶ ಹೊರಡಿಸಿದ್ದು ದರ್ಶನ್ ಅರ್ಜಿಯನ್ನು ಭಾಗಷಃ ಪುರಸ್ಕರಿಸಿದೆ. ಆದರೆ ಪ್ರದೋಶ್ ಮಾಫಿ ಸಾಕ್ಷಿ ಹೇಳಿಕೆಗೆ ತಡೆ ನೀಡಿಲ್ಲ. ಬದಲಿಗೆ ಮತ್ತೊಮ್ಮೆ ಆದೇಶ ಹೊರಡಿಸುವಂತೆ ವಿಚಾರಣಾ ನ್ಯಾಯಾಲಯಕ್ಕೆ ಸೂಚಿಸಿದೆ.

ಇನ್ನು ಹೊಸದಾಗಿ ವಿಚಾರಣೆ ನಡೆಸುವ ಯಾವುದೇ ಅಗ್ಯವಿಲ್ಲ. ಒಂದು ವಾರದಲ್ಲಿ ಮರು ಆದೇಶ ಹೊರಡಿಸಲು ಹೈಕೋರ್ಟ್ ಸೂಚನೆ ನೀಡಿದೆ. ಇದೀಗ ವಿಚಾರಣಾ ನ್ಯಾಯಾಲಯವು ಮರು ಆದೇಶವನ್ನಷ್ಟೆ ಮಾಡಬೇಕಿದೆ.

# ರೈತರ ವಿಮೆ ಹಣ ಕಟ್ಟದ, ಸೊಸೈಟಿ ಕಾರ್ಯದರ್ಶಿ ವಜಾಕ್ಕೆ ಸಿಎಂ ಡಿಕೆಶಿ ಸೂಚನೆ

ಮಾರುಕಟ್ಟೆಯಲ್ಲಿ ರೈತರಿಂದ ಕಮಿಷನ್ ಪಡೆಯುವುದಿಲ್ಲ. ಹೀಗಾಗಿ ನಾವು ಇಲ್ಲಿಗೆ ತಂದು ಹಾಕುತ್ತೇವೆ ಎಂದು ರೈತರು ಮಾಹಿತಿ ನೀಡಿ-ದರು. ಈ ಬಾರಿ ಮಳೆ ಕೊರತೆಯಿಂದಾಗಿ ಇಳುವರಿ ಕಡಿಮೆಯಾಗಿದೆ. ಎಕರೆಗೆ 150-200 ಪ್ಯಾಕೆಟ್ ಈರುಳ್ಳಿ ಬರುತ್ತದೆ. ಆದರೆ ಈ ಬಾರಿ ಕೇವಲ 50 ಪ್ಯಾಕೆಟ್ ಮಾತ್ರ ಸಿಕ್ಕಿದೆ ಎಂದು ವಿವರಿಸಿದರು. ಮಳೆ ಹೆಚ್ಚಾದರೆ ಈರುಳ್ಳಿ ಜಮೀನಿನಲ್ಲೇ ಕೊಳೆಯುತ್ತದೆ ಆಗ ಸರಿಯಾದ ಬೆಲೆ ಸಿಗುವುದಿಲ್ಲ. ಅದನ್ನು ಮಾರುಕಟ್ಟೆಗೆ ತಂದು ಹಾಕಲು ಆಗುವ ಖರ್ಚಿನಷ್ಟು ಹಣ ಸಿಗುವುದಿಲ್ಲ ಎಂದು ರೈತರು ವಿವರಿಸಿದರು.

ಬೆಳೆಗೆ ವಿಮೆ ಮಾಡಿಸುವುದಿಲ್ಲವೇ ಎಂದು ಸಿಎಂ ಕೇಳಿದಾಗ, ನಾವು ಹೆಕ್ಟೆರ್ ಗೆ 6,500 ರೂ. ವಿಮೆ ಕಟ್ಟಿದ್ದರೂ ನಮಗೆ ಏನೂ ಸಿಕ್ಕಿಲ್ಲ ಎಂದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರೈತ ತಮ್ಮ ನೋವು ತೋಡಿಕೊಂಡರು. ರೈತರ ಮಾಹಿತಿ ಪಡೆಯುವಂತೆ ಸಿಎಂ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಳೆದ 30 ವರ್ಷಗಳಲ್ಲಿ ಯಾವುದೇ ಸಚಿವರು ಮುಖ್ಯಮಂತ್ರಿಗಳು ಮಾರುಕಟ್ಟೆಗೆ ಬಂದು ರೈತರ ಸಮಸ್ಯೆಗಳನ್ನು ವಿಚಾರಿಸಿರಲಿಲ್ಲ. ನೀವು ಬಂದು ಪರಿಸ್ಥಿತಿ ಪರಿಶೀಲನೆ ಮಾಡುತ್ತಿರುವುದು ಬಹಳ ಸಂತೋಷ ತಂದಿದೆ ಎಂದು ರೈತರು ಸಿಎಂ ಕಾರ್ಯವೈಖರಿಯನ್ನು ಶ್ಲಾಘಿಸಿದರು. ಮಾರುಕಟ್ಟೆಯಲ್ಲಿನ ಮಂಡಿ ವರ್ತಕರೊಂದಿಗೆ ಮಾತುಕತೆ ನಡೆಸಿದ ಸಿಎಂ, "ನೀವು ಎಪಿಎಂಸಿಗೆ ಎಷ್ಟು ಪಾವತಿ ಮಾಡುತ್ತೀರಿ ಎಂದು ಕೇಳಿದರು. ಅದಕ್ಕೆ ವರ್ತಕರು ನೂರು ರೂ.ಗೆ 60 ಪೈಸೆ ಪಾವತಿ ಮಾಡುತ್ತೇವೆ ಎಂದರು. ಬೇರೆ ವರ್ತಕ 1 ರೂ. ಪಾವತಿ ಮಾಡುತ್ತಿರುವುದಾಗಿ ತಿಳಿಸಿದರು. ಆ ರೀತಿ ಏನಾದರೂ ಹೆಚ್ಚು ಹಣ ಪಡೆದರೆ ನನಗೆ ಹೇಳಿ ಅವರನ್ನು ನಾನು ಮಟ್ಟ ಹಾಕುತ್ತೇನೆ" ಎಂದು ಹೇಳಿದರು.

ಕೆಲವರು ಎಪಿಎಂಸಿ ಮಾರುಕಟ್ಟೆಗೆ ಬರುವುದಿಲ್ಲ ನೇರವಾಗಿ ರೈತರಿಂದ ಖರೀದಿ ಮಾಡುತ್ತಾರೆ. ಅಲ್ಲಿ ಒಂದು ಬೆಲೆ ನಿಗದಿ ಮಾಡಿ ತೂಕ ಹೆಚ್ಚು ಕಮ್ಮಿ ಮಾಡಿ ತೆಗೆದುಕೊಂಡು ಹೋಗುತ್ತಾರೆ ಎಂದು ಹೇಳಿದರು. ಆಗ ಸಿಎಂ, ಈ ರೀತಿ ರೈತರಿಂದ ನೇರವಾಗಿ ಖರೀದಿ ಮಾಡುವವರು ತೂಕದಲ್ಲಿ ಹೆಚ್ಚು ಕಮ್ಮಿ ಮಾಡದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೂಡ್ಲಿಗಿಯ ಹೊಸಹಟ್ಟಿ ಗ್ರಾಮದ ಆಂಜನಪ್ಪ ಎಂಬ ಈರುಳ್ಳಿ ಬೆಳೆದ ರೈತನ ಜೊತೆ ಮಾತನಾಡುತ್ತಿರುವಾಗ, ಬೆಳೆಗೆ ನೀರಿನ ವ್ಯವಸ್ಥೆ ಹೇಗೆ ಎಂದು ಕೇಳಿದರು. ಅದಕ್ಕೆ ರೈತ, ನಾನು ತೋಟದಲ್ಲಿ ಮನೆ ಕಟ್ಟಿಕೊಂಡಿದ್ದು ಅದಕ್ಕೆ ವಿದ್ಯುತ್ ಸಂಪರ್ಕಕ್ಕಾಗಿ ಮೂರು ಬಾರಿ ಅರ್ಜಿ ಹಾಕಿದರೂ ಸಂಪರ್ಕ ಸಿಕ್ಕಿಲ್ಲ. ಕೇವಲ ನನಗೆ ಮಾತ್ರವಲ್ಲ ಇದೇ ರೀತಿ ಹತ್ತಾರು ಮನೆಗಳಿವೆ ಎಂದು ಸಮಸ್ಯೆ ಹೇಳಿಕೊಂಡರು. ರೈತನ ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ ಸಿಎಂ, "ನಾನು ಪ್ರಜಾಸೇವೆ ಕಾರ್ಯಕ್ರಮ ಮಾಡಿದಾಗ, ಬಂದು ನನಗೆ ವಿದ್ಯುತ್ ಸಂಪರ್ಕ ಸಿಕ್ಕಿಲ್ಲ ಎಂದು ಅರ್ಜಿ ನೀಡಬಾರದೇ ಎಂದರು. ಯೋಚನೆ ಮಾಡುವುದು ಬೇಡ. ಎಲ್ಲರಿಗೂ ವಿದ್ಯುತ್ ಸಂಪರ್ಕ ಸಿಗುವಂತೆ ಮಾಡಲಾಗುವುದು" ಎಂದು ಭರವಸೆ ನೀಡಿದರು.

"ನಿಮ್ಮ ಮನೆ ಯಜಮಾನಿಗೆ ಪ್ರತಿ ತಿಂಗಳು 2 ಸಾವಿರ, 10 ಕೆಜಿ ಅಕ್ಕಿ ಸಿಗುತ್ತಿದೆಯೇ? ಎಂದು ವಿಚಾರಿಸಿದರು. ಆಗ ಗ್ಯಾರಂಟಿ ಯೋಜನೆಗಳು ನಮಗೆ ಸಿಗುತ್ತಿದ್ದು, ಅದರಿಂದ ಅನುಕೂಲವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

# ಆನ್‌ಲೈನ್‌ನಲ್ಲೇ ಶಾಸಕರ ಆಸ್ತಿ-ದಾಯಿತ್ವ ವಿವರ ಸಲ್ಲಿಸಲು ಲೋಕಾಯುಕ್ತ ಅವಕಾಶ

2025-26ನೇ ಸಾಲಿನಲ್ಲಿ ಮಾತ್ರ ಶಾಸಕರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಗಳನ್ನು ಭೌತಿಕವಾಗಿ ಹಾಗೂ ಲೋಕಾಯುಕ್ತದ ಜಾಲತಾಣದ ಮೂಲಕ ಸಲ್ಲಿಸಲು ಅವಕಾಶ ನೀಡಲಾಗಿದೆ. ಆದರೆ, ಮುಂದಿನ ಆರ್ಥಿಕ ವರ್ಷಗಳಲ್ಲಿ ಜಾಲತಾಣದ ಮೂಲಕ ಮಾತ್ರ ವಿವರಗಳನ್ನು ಸ್ವೀಕರಿಸಲಾಗುವುದು ಎಂದು ಲೋಕಾಯುಕ್ತದ ನಿಬಂಧಕರು ವಿಧಾನಸಭೆ ಸಚಿವಾಲಯಕ್ಕೆ ಪತ್ರದ ಮೂಲಕ ತಿಳಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 22ರ ಪ್ರಕಾರ, ಚುನಾಯಿತ ಜನಪ್ರತಿನಿಧಿಗಳು ಪ್ರತಿ ವರ್ಷ ಮಾರ್ಚ್ 31ಕ್ಕೆ ಹೊಂದಿರುವ ತಮ್ಮ ಆಸ್ತಿ ಮತ್ತು ದಾಯಿತ್ವಗಳ ವಿವರಗಳನ್ನು ಜೂನ್ 30ರೊಳಗಾಗಿ ಲೋಕಾಯುಕ್ತಕ್ಕೆ ಸಲ್ಲಿಸಬೇಕು.

ಲೋಕಾಯುಕ್ತ ಕಾಯ್ದೆಯ ನಿಯಮ 7ಕ್ಕೆ ತಿದ್ದುಪಡಿ ಮಾಡಿ ಆದೇಶ ಹೊರಡಿಸಿರುವ ಹಿನ್ನೆಲೆಯಲ್ಲಿ ಶಾಸಕರು ಇನ್ನು ಮುಂದೆ ಆಸ್ತಿ ಮತ್ತು ದಾಯಿತ್ವಗಳ ಮಾಹಿತಿಯನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬೇಕಾಗಿದೆ ಎಂದು ವಿಧಾನಸಭೆ ಕಾರ್ಯದರ್ಶಿ ತಿಳಿಸಿದ್ದಾರೆ.

# ಇಂದು ಬಳ್ಳಾರಿ ನಗರಕ್ಕೆ ಬಿಜೆಪಿ ಪಾದಯಾತ್ರೆ ಎಂಟ್ರಿ

# ನಾಳೆ "ಬಳ್ಳಾರಿ ಚಲೋ" ಬೃಹತ್ ಸಮಾರೋಪ

ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತು ಬಿಜೆಪಿ ಮಧ್ಯೆ ಎದುರಾಗಿದ್ದ ಸಮಾವೇಶ ಸ್ಥಳ ವಿಚಾರ ಇತ್ಯರ್ಥವಾಗಿದೆ. ಕಳೆದ 8 ದಿನಗಳಿಂದ ಬಿಜೆಪಿ ಕೈಗೊಂಡಿರುವ ಬಳ್ಳಾರಿ ಪಾದಯಾತ್ರೆ ಬುಧವಾರ ಬಳ್ಳಾರಿ ನಗರಕ್ಕೆ ಎಂಟ್ರಿಯಾಗಲಿದೆ.

ಗುರುವಾರ ಬಳ್ಳಾರಿ ನಗರ ಮುನ್ಸಿಪಾಲ್ ಶಾಲೆ ಮೈದಾನದಲ್ಲಿ ಬೃಹತ್ ಸಮಾರೋಪ ಸಮಾರಂಭಕ್ಕೆ ಬಿಜೆಪಿ ಪ್ಲ್ಯಾನ್ ಮಾಡಿದೆ. ಅಂದು ಮಧ್ಯಾಹ್ನ 3 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ಸಮಾವೇಶ ನಡೆಸಲು ಮೈದಾನ ನೀಡುವಂತೆ ಬಿಜೆಪಿ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ಅನಿಲ್ ಕುಮಾರ್ ಮೋಕಾ ಸೋಮವಾರ ಮನವಿ ಸಲ್ಲಿಸಿದ್ದರು. ಆದರೆ, 2015ರ ಆದೇಶ ಉಲ್ಲೇಖಿಸಿ, ಕಾರ್ಯಕ್ರಮಕ್ಕೆ ಅನುಮತಿ ಕೊಡಲು ಆಗಲ್ಲ. ಸರ್ಕಾರಿ ಕಾಲೇಜು ಮೈದಾನ, ಕಟ್ಟಡಗಳಲ್ಲಿ ಸಂಘ-ಸಂಸ್ಥೆಗಳು, ಖಾಸಗಿಯವರಿಗೆ ಜಾಗ ನೀಡಲು ಆಗಲ್ಲ ಅಂತ ಪಿಯು ಬೋರ್ಡ್ ಆದೇಶಿಸಿತ್ತು.

ಈ ಬೆನ್ನಲ್ಲೇ ಬಿಜೆಪಿ ನಾಯಕರು ಸವಾಲೆಸೆದಿದ್ದರು. ನಿಗದಿತ ಸ್ಥಳದಲ್ಲಿ ಗುರುವಾರ ಸಮಾವೇಶ ನಡೆಸಿಯೇ ತೀರುವುದಾಗಿ ಎಚ್ಚರಿಕೆಯೂ ಕೊಟ್ಟಿದ್ದರು. ಈ



ಜಗ್ಗಾಟದ ಮಧ್ಯೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ಮೇರೆಗೆ ಸಂಜೆ ಹೊತ್ತಿಗೆ ಬಳ್ಳಾರಿ ಜಿಲ್ಲಾಧಿಕಾರಿ ಷರತ್ತುಬದ್ಧ ಅನುಮತಿ ನೀಡಿದ್ದಾರೆ.

ಇನ್ನು, ಕಾಲಿನ ಶಸ್ತ್ರಚಿಕಿತ್ಸೆಯಿಂದಾಗಿ ಪಾದಯಾತ್ರೆಯಿಂದ ದೂರ ಉಳಿದಿದ್ದ ವಿಪಕ್ಷ ನಾಯಕ ಆರ್. ಅಶೋಕ್, ಬುಧವಾರ ಮತ್ತು ಗುರುವಾರ ಭಾಗಿ ಆಗಲಿದ್ದಾರೆ. ಸದ್ಯಕ್ಕೆ ವಿಜಯೇಂದ್ರ ಪಾದಯಾತ್ರೆ ಕುಡುತಿನಿ ಪಟ್ಟಣ ತಲುಪಿದೆ. ಇಂದು ಬೆಳಗ್ಗೆ ಸಂಡೂರಿನ ಹಳೇದರೋಜಿಯಿಂದ 18 ಕಿ.ಮೀ. ಕ್ರಮಿಸಿತು. ಕುಡುತಿನಿ ಪಟ್ಟಣದ ಸಮಾವೇಶದಲ್ಲಿ ಕಿಡಿ-ಕಾರಿದ ಸಿಟಿ ರವಿ ರಾಜೀನಾಮೆ ಕೊಡ್ತೀನಿ ಅಂದಿದ್ಯಲ್ಲ ಬಾ ಎಂದು ನಾಗೇಂದ್ರಗೆ ಚಾಲೆಂಜ್ ಹಾಕಿದರು.

# ವಚನ ಸಾಹಿತ್ಯ ಸಮಾಜದಲ್ಲಿ ನೈತಿಕ ಮೌಲ್ಯವನ್ನು ಹೆಚ್ಚಿಸುತ್ತದೆ" - ಡಾ. ನಿಷ್ಠಿ ಅಭಿಮತ



ಬಳ್ಳಾರಿ, ಸೆ.08: 12ನೇ ಶತಮಾನವನ್ನು ವಚನಕಾರರ ಸುವರ್ಣ ಯುಗ ಎಂದು ಕ-ರೆಯುತ್ತಾರೆ ವಚನಕಾರರು ಸಮಾಜದಲ್ಲಿ ಮಾನವೀಯತೆ, ಕಾಯಕ, ದಾಸೋಹ ಮತ್ತು ಸಾಮಾಜಿಕ ನ್ಯಾಯ ಇಂತಹ ಮೌಲ್ಯಗಳನ್ನು ಹೆಚ್ಚಿಸುವ ಕೆಲಸವನ್ನು ವಚನಕಾರರು ತಮ್ಮ ವಚನಗಳ ಮೂಲಕ ಸಾಬೀತುಪಡಿಸಿದ್ದಾರೆ.

ಜಾತಿ, ವರ್ಣ, ಲಿಂಗ, ಸಾಮಾಜಿಕ ಸ್ಥಾನಮಾನಗಳ ಆಧಾರದ ಮೇಲೆ ಮನುಷ್ಯರನ್ನು ವಿಭಜಿಸಬಾರದು ಎಂಬ ಸಂದೇಶವನ್ನು ನೀಡಿ-ದರು ನಡತೆ ಮತ್ತು ಕಾಯಕ ವ್ಯಕ್ತಿಯ ಮೌಲ್ಯವನ್ನು ಗುರುತಿಸುತ್ತದೆ ಕಾಯ -ವಾಚಾ ಮನಸ ಪರಿಶುದ್ಧವಾಗಿ ದುಡಿಯುವುದೇ ಪ್ರಾಮಾಣಿಕ ಕಾಯಕ ಎಂದು ತಮ್ಮ ಉಪನ್ಯಾಸದಲ್ಲಿ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಬಳ್ಳಾರಿ ತಾಲೂಕು ಘಟಕವು ಬಳ್ಳಾರಿಯ ನೇತಾಜಿ ನಗರದ ಗಣೇಶ ದೇವಸ್ಥಾನದ ಆವರಣದಲ್ಲಿ ಲಿಂ. ಅಕ್ಕಿ ಪರ್ವತಪ್ಪ ಮತ್ತು ಲಿಂ. ಅಕ್ಕಿ ಈರಮ್ಮ ಕುಡುತಿನಿ ಇವರ ಸ್ಮರಣಾರ್ಥ ದತ್ತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಪ್ರಾರಂಭದಲ್ಲಿ ಟಿ.ತಿಮ್ಮಪ್ಪ ಅವರು ಪ್ರಾರ್ಥನೆಯನ್ನು ನೆರವೇರಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷರಾದ ನಾಗರೆಡ್ಡಿ ಕೆ.ವಿ. ರವರು ಗಣ್ಯಮಾನ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕ ನುಡಿ ನುಡಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಕಾಂಗ್ರೆಸ್ ಮುಖಂಡರಾದ ಶ್ರೀಯುತ ಎಲ್ ಮಾರಪ್ಪ ರವರು ಉದ್ಘಾಟಿಸಿ ತಮ್ಮ ಉದ್ಘಾಟನಾ ನುಡಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡದ ಬಗ್ಗೆ ವಿಶೇಷ ಕಾಳಜಿ ಮತ್ತು ಜವಾಬ್ದಾರಿ ಇರುವ ಸಂಸ್ಥೆ. ಗಡಿ ಭಾಗದಲ್ಲಿ ಕನ್ನಡವನ್ನು ಉಳಿಸುವ ಕೆಲಸವನ್ನು ಮಾಡುತ್ತದೆ ಎಂದು ತಮ್ಮ ಉದ್ಘಾಟನಾ ನುಡಿಯಲ್ಲಿ ನುಡಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಖಂಡ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ನಿಷ್ಠಿ ರುದ್ರಪ್ಪ ರವರು ಬಸವಣ್ಣನವರ ವಚನಗಳಲ್ಲಿ ಸಾಮಾಜಿಕ ಮೌಲ್ಯಗಳು ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು

ಗಾಯಕರಾದ ಟಿ ತಿಮ್ಮಪ್ಪ, ರಾಘವೇಂದ್ರ ಗುಡದೂರ್ ವಿಜೇಂದ್ರ ಕ್ಷತ್ರಿಯ, ಗಣೇಶ್ ಅಭಯ್ ಕಶಪ್, ದೊಡ್ಡ ಬಸವ ಗವಾಯಿಗಳು ವಚನ ಗಾಯನ ಮಾಡಿದರು. ತಬಲವಾದಕರಾದ ವಿರೂಪಾಕ್ಷಪ್ಪಟಿ., ಕೀಪ್ಯಾಡ್ ವಾದಕರಾದ ತಿಪ್ಪೇಸ್ವಾಮಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ದತ್ತಿದಾನಿಗಳಾದ ಶ್ರೀಯುತ ಅಕ್ಕಿ ಮಲ್ಲಿಕಾರ್ಜುನ ಸರ್ ರವರು ವಚನ ಗಾಯನ ನಡೆಸಿಕೊಟ್ಟ ಎಲ್ಲಾ ಗಣ್ಯಮಾನ್ಯರಿಗೂ ಸತ್ಕರಿಸಿದರು . ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಕಾರ್ಯಕಾರಿ ಸಮಿತಿ ಸದಸ್ಯರಾದ ಬಿ.ಶ್ರೀಧರ್ ಕಾರ್ಯಕ್ರಮವನ್ನು ನಿರೂಪಿಸಿದರು. ಕೋಶಾಧ್ಯಕ್ಷರಾದ ಎಂ. ಶರಣಬಸವ ಕೊನೆಗೆ ವಂದಿಸಿದರು.

# ಪರಿಷ್ಕೃತ ಕನಿಷ್ಠ ವೇತನ ಜಾರಿಗಾಗಿ ಪತ್ರ ಚಳುವಳಿ

ಬಳ್ಳಾರಿ : "ಕನಿಷ್ಠ ವೇತನ ಜಾರಿಗಾಗಿ ಹೋರಾಟ ಸಮಿತಿ" ಕರೆಯ ಮೇರೆಗೆ ರಾಜ್ಯವ್ಯಾಪಿ ಗುತ್ತಿಗೆ ಕಾರ್ಮಿಕರ ಪತ್ರ ಚಳುವಳಿಗೆ ಬಳ್ಳಾರಿಯಲ್ಲಿ ಚಾಲನೆ ನೀಡಲಾಯಿತು. ಎಐಯುಟಿಯುಸಿ ಗೆ ಸಂಯೋಜಿತಗೊಂಡ ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘ(ರಿ) ಸದಸ್ಯರು ಈ ಚಳುವಳಿಯಲ್ಲಿ ಭಾಗವಹಿಸಿದ್ದರು.

ಹತ್ತು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಕನಿಷ್ಠ ವೇತನದ ಪರಿಷ್ಕರಣೆ ಕೊನೆಗೂ ಮೇ 22 ರಂದು ಜಾರಿಗೊಂಡಿದ್ದು ನಮ್ಮೆಲರ ಮುಖದಲ್ಲಿ ಮಂದಹಾಸವನ್ನು ಮೂಡಿಸಿತ್ತು. ಸಮಸ್ತ ಗುತ್ತಿಗೆ ಹಾಗೂ ಹೊರಗುತ್ತಿಗೆ ಕಾರ್ಮಿಕರಾದ ನಾವು ರಾಜ್ಯ ಸರ್ಕಾರಕ್ಕೆ ಕೃತಜ್ಞತೆಯನ್ನು ಸಲ್ಲಿಸಿದ್ದೆವು, ಆದರೆ ತಾವು ರಾಜ್ಯದ ಚುಕ್ಕಾಣಿ ಹಿಡಿದ ತರುವಾಯ ಪರಿಷ್ಕೃತ ವೇತನ ಕ್ಯಾಬಿನೆಟ್ ಉಪ ಸಮಿತಿಯನ್ನು ರಚಿಸಿ ನಮ್ಮ ಹೊಟ್ಟೆ ಮೇಲೆ ಹೊಡೆದಿದ್ದೀರಿ ತೀವ್ರ ಬೆಲೆ ಏರಿಕೆಯ ಈ ದಿನಮಾನಗಳಲ್ಲಿ ಶಾಸನಬದ್ಧವಾದ ಹೆಚ್ಚಳವನ್ನು ತಡೆಹಿಡಿದಿರುವುದು ಅತ್ಯಂತ ದುರದೃಷ್ಟಕರ ಸಂಗತಿ ಈ ಕೂಡಲೇ ತಾವು ಪರಿಸ್ಕøತ ಹೊಸ ವೇತನ ಜಾರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ನಾವು ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇವೆ. ಇಂತಿ ನೊಂದ ಕಾರ್ಮಿಕರು.

ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಡಾ.




ಪ್ರಮೋದ್ ಮಾತನಾಡುತ್ತ " ಕೈಗೆ ಬಂದ ತುತ್ತು ಬಾಯಿಗೆ ಬರದಂತೆ ಸರ್ಕಾರ ಕಿತ್ತುಕೊಂಡಿದೆ. ಇದನ್ನು ಕಾರ್ಮಿಕರು ಎಂದಿಗೂ ಸಹಿಸುವುದಿಲ್ಲ, ದೊಡ್ಡ ಮಟ್ಟದ ಹೋರಾಟಕ್ಕೆ ಎಲ್ಲಾ ಗುತ್ತಿಗೆ ಕಾರ್ಮಿಕರು ತಯಾರಾಗಬೇಕು. ಪ್ರಸ್ತುತ ಈ ಪತ್ರ ಚಳುವಳಿಯಲ್ಲಿ ಎಲ್ಲಾ ಗುತ್ತಿಗೆ ಕಾರ್ಮಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕು. ಲಕ್ಷಾಂತರ ಪತ್ರಗಳು ಮುಖ್ಯಮಂತ್ರಿಗಳಿಗೆ ತಲುಪಲಿ ಎಂದು ಕರೆನೀಡಿದರು.

ಎಐಯುಟಿಯುಸಿ ಜಿಲ್ಲಾ ಅಧ್ಯಕ್ಷರಾದ ಎ.ದೇವದಾಸ್, ವಸತಿ ನಿಲಯ ಕಾರ್ಮಿಕರ ಸಂಘದ ಜಿಲ್ಲಾ ಕಾರ್ಯದರ್ಶಿ ಸುರೇಶ್. ಜಿ. ಮುಖಂಡರಾದ ಕಿರಣ್ ಕುಮಾರ್, ಮುರಳಿ ಕೃಷ್ಣ, ಚೇತನ್, ಅಶ್ವಿನಿ, ಖಜಾಸಾಬ್, ಲಕ್ಷ್ಮಿ, ಶಾರದಾ, ನಾಗೇಶಯ್ಯ, ಭಾ-ಗಿಯಾಗಿದ್ದರು.

# ಸಮಸ್ಯೆ ಪರಿಹರಿಸುವ ನೆಪದಲ್ಲಿ ತಾಳಿ ಕದ್ದೊಯ್ದ ಖದೀಮರು

ಗಂಗಾವತಿ: ನಿಮ್ಮ ಮನೆಯಲ್ಲಿ ಮಾಟ-ಮಂತ್ರ ಮಾಡಿಸಿ, ವಸ್ತುಗಳು ಇಟ್ಟಿದ್ದಾರೆ. ಇನ್ನೆರಡು ತಿಂಗಳಲ್ಲಿ ನಿಮ್ಮ ಮಗ ಸಾಯಲಿದ್ದಾನೆ. ಇವುಕ್ಕೆಲ್ಲ ಪರಿಹಾರ ಮಾಡಿಕೊಡುತ್ತೇವೆ ಎಂದು ಭಿಕ್ಷಾಟನೆ ಮಾಡುವ ನೆಪದಲ್ಲಿ ಬಂದ ಇಬ್ಬರು ಖದೀಮರು ಮಹಿಳೆಯನ್ನ ಯಾಮಾರಿಸಿ ಮಾಂಗಲ್ಯಸರ ಕದ್ದೊಯ್ದ ಘಟನೆ ಸೋಮವಾರ ಬೆಳಿಗ್ಗೆ ಗಂಗಾವತಿ ತಾಲ್ಲೂಕಿನ ರಾಮದುರ್ಗಾ(ಗೂಗಿಬಂಡಿ) ಗ್ರಾಮದಲ್ಲಿ ಜರುಗಿದೆ.

ಮಾಂಗಲ್ಯಸರ ಕಳೆದುಕೊಂಡ ಮಹಿಳೆ ರಾಮದುರ್ಗಾ ಗ್ರಾಮದ ಜುಬೇದಾ ಬೇಗಂ ಎಂದು ತಿಳಿದು ಬಂದಿದೆ. ಬೆಳಿಗ್ಗೆ ಆನೆಗೊಂದಿ ಭಾಗದಿಂದ ಇಬ್ಬರು ಹಗಲುವೇಷಧರಿ ಸಿಕೊಂಡು, ಭಿಕ್ಷಾಟನೆಗೆ ರಾಮದುರ್ಗಾ ಗ್ರಾಮಕ್ಕೆ ತೆರಳಿ, ಅಲ್ಲಿನ ಜುಬೇದಾ ಬೇಗಂ ಅವರ ಮನೆಗೆ ಹೋಗಿ ಭಿಕ್ಷಾಟನೆ ಮಾಡಿದ್ದರು.

ಈ ವೇಳೆ ಮಹಿಳೆಯ ಹಗಲುವೇಷಗಾರರಿಗೆ ಅಕ್ಕಿಯನ್ನು ನೀಡಿದ್ದರು. ಇದನ್ನು ಪಡೆಯಲು ನಿರಾಕರಿಸಿದ ಹಗಲುವೇಷಗಾರರು ಮಹಿಳೆಗೆ ನಿಮ್ಮ ಮನೆಗೆ ಕೆಲವರು ಮಾಟ-ಮಂತ್ರ ಮಾಡಿಸಿ, ಕೆಲ ವಸ್ತುಗಳು ಇಟ್ಟಿದ್ದಾರೆ.

ಇದರಿಂದ ನಿಮ್ಮ ಮಗ ಎರಡು ತಿಂಗಳಲ್ಲಿ ಸಾಯಲಿದ್ದಾನೆ. ಇದಕ್ಕೆಲ್ಲ ನಾವು ಪರಿಹಾರ ಮಾಡಿಕೊಡುತ್ತೇವೆ. ನಾವು ಸುತ್ತಮುತ್ತಲಿನ ಮಂದಿ ಅಲ್ಲ, ನಾವು ಆಂಧಪ್ರದೇಶದ ಪೆನುಗೊಂಡದವರು ಎಂದು ಪರಿಚಯ ಮಾಡಿಕೊಂಡಿದ್ದಾರೆ.

ನಿಮ್ಮ ಸಮಸ್ಯೆಗೆ ನಾವು ಪರಿಹಾರ ಮಾಡಿಕೊಡುತ್ತೇವೆ. ನಿಮ್ಮ ಮನೆಯಲ್ಲಿ ಬಂಗಾರದ ಆಭರಣಗಳು ಇವೆಯಾ ಅಂತ ಕೇಳಿದ್ದು, ಮಹಿಳೆ ಮನೆಯಲ್ಲಿ ಯಾವ ಆಭರಣಗಳು ಇಲ್ಲ ಎಂದು ಹೇಳಿದಾಗ, ತಾಳಿಯನ್ನು ಬಿಚ್ಚಿ ಬಟ್ಟೆಯಲ್ಲಿ ಇಡಿ. ನಾವು ಪೂಜೆ ಮಾಡುತ್ತೇವೆ. ಇದಾದ ಬಳಿಕೆ ನಮಾಜ್ ಮಾಡಿ 1 ಗಂಟೆಯ ನಂತರ ತಾಳಿ ಕಟ್ಟಿದ ಬಟ್ಟೆ ಬಿಚ್ಚುವಂತೆ ತಿಳಿಸಿದ್ದಾರೆ.

# ಆರೋಗ್ಯಕರ ಜೀವನ ಶೈಲಿಗೆ ಕರೆ



ಬಳ್ಳಾರಿ: ಎಚ್‌ಐವಿ ನಿಯಂತ್ರಣ ಹಾಗೂ ಆರೋಗ್ಯಕರ ಜೀವನಶೈಲಿಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದಲ್ಲಿ ಮಂಗಳವಾರ ಎಚ್‌ಐವಿ ಜಾಗೃತಿ ಮ್ಯಾರಥಾನ್ ಆಯೋಜಿಸಲಾಯಿತು. 'ಓಟ ಆರೋಗ್ಯ-ಕ್ಕೆ ನಡಿಗೆ ಎಚ್‌ಐವಿ ನಿಯಂತ್ರಣ-ಕ್ಕೆ' ಎಂಬ ಧ್ಯೇಯವಾಕ್ಯದೊಂದಿಗೆ ನಡೆದ ಮ್ಯಾರಥಾನ್‌ನಲ್ಲಿ ನಗರದ ವಿವಿಧ ಪದವಿ, ಪದವಿ ಪೂರ್ವ ಹಾಗೂ ಡಿಪ್ಲೋಮಾ ಕಾಲೇಜುಗಳ 200ಕ್ಕೂ ಅಧಿಕ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉತ್ಸಾಹದಿಂದ ಪಾಲ್ಗೊಂಡರು. ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಎಚ್‌ಐವಿ ನಿಯಂತ್ರಣ ಮತ್ತು ನಿರ್ವಹಣಾ ಘಟಕ, ವಿವಿಧ ಕಾಲೇಜುಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಇಂದಿರಾ ವೃತ್ತದಲ್ಲಿ ಮ್ಯಾರಥಾನ್‌ಗೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಸರೆಡ್ಡಿ ಮಾತನಾಡಿ, ಮ್ಯಾರಥಾನ್ ಓಟ ದೈಹಿಕ ಸಾಮರ್ಥ್ಯವನ್ನು ವೃದ್ಧಿಸಿದರೆ, ನಡಿಗೆ ಮನೋಬಲ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಯುವಜನತೆ ದುಶ್ಚಟಗಳಿಗೆ ಬಲಿಯಾಗದೆ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾಜದಲ್ಲಿ ಎಚ್‌ಐವಿ ನಿಯಂತ್ರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸುವುದು ಇಂದಿನ ಅಗತ್ಯವಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಡ್ಯಾಪ್ಕು, ಐಸಿಟಿಸಿ, ಮೊಬೈಲ್ ಐಸಿಟಿಸಿ, ಡಿಎಸ್‌ಆರ್‌ಸಿ, ಎಆರ್‌ಟಿ, ಎಸ್‌ಎಸ್‌ಕೆ ಹಾಗೂ ವಿಮುಕ್ತಿ, ಸೌಖ್ಯ, ಬೆಳಕು ಸಮುದಾಯ ಸೇವಾ ಸಂಸ್ಥೆ, ನಿತ್ಯ ಜೀವನ ಮತ್ತು ಎಫ್‌ಪಿಎಐ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ರಕ್ತಕೇಂದ್ರದ ಸಿಬ್ಬಂದಿ ಭಾಗವಹಿಸಿದ್ದರು


# ವರ್ಲ್ಡ್ ಬುಕ್ ರೆಕಾರ್ಡ್‌ಗೆ ಸೇರ್ಪಡೆ



ಬಳ್ಳಾರಿ : ಸರಸ್ವತಿ ನೃತ್ಯ ಕಲಾ ಕೇಂದ್ರ ಹಾಗು ನಾಟ್ಯ ಕುಸುಮಾಂಜಲಿ ಸಾಂಸ್ಕೃತಿಕ ವೇದಿಕೆ ವತಿಯಿಂದ ಬೆಂಗಳೂರು ನ್ಯಾಷನಲ್ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡ ಭಾರತ ವಾರಿಧಿ ವೇದಿಕೆ ಯಲ್ಲಿ ಜಯಚಾಮ ರಾಜೇಂದ್ರ ಒಡೆಯರ. ಎರಡು ಕೃತಿಗಳಿಗೆ ರಾಜ್ಯ ಮಟ್ಟದ ಎರಡು ಸಾವಿರ ನೃತ್ಯ ಕಲಾವಿದರು ನೃತ್ಯ ಪ್ರದರ್ಶನ ಮಾಡಿ ವರ್ಲ್ಡ್. ಬುಕ್ ರೆಕಾರ್ಡ್ ಗೆ ಸೇರ್ಪಡೆ ಯಾದರು. ಇದರಲ್ಲಿ ಬಳ್ಳಾರಿ. ಯಭಾರತಿ ನಾಟ್ಯ ಕಲಾ ಟ್ರಸ್ಟ್ (ರಿ)ನ 25ವಿದ್ಯಾರ್ಥಿಗಳು ಭಾಗವಹಿಸಿ . ಭರತ ನಾಟ್ಯ ಮಾಡಿ. ರಂಜಿಸಿವಿಶ್ವ ದಾಖಲೆಗೆ ಪಾತ್ರರಾದರು..

ಈ ಸಂದರ್ಬದಲ್ಲಿ ಭಾರತಿ ನಾಟ್ಯ ಕಲಾ. ಟ್ರಸ್ಟ್ ನ ನೃತ್ಯ ಗುರುಗಳಾದ ಶ್ರೀಮತಿ ವೈಷ್ಣವಿ ಕುಲಕರ್ಣಿ ಯವರನ್ನು ಕಾಯ9ಕ್ರಮ ಆಯೋಜಕರು ಸನ್ಮಾನ ಮಾಡಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು. ಬೆಂಗಳೂರು ಗ್ರಾಮಾಂತರ ಸಂಸದ ರಾದ. ಡಾ. ಮಂಜುನಾಥ್ ಅವರು ಭಾಗ ಹಿಸಿದ ಭಾರತಿ ನಾಟ್ಯ ಕಲಾ ಟ್ರಸ್ಟ್ ನ ಮಕ್ಕಳ ಸಾಧನೆಯನ್ನು ಶ್ಲಾಘಿಸಿ ಅಭಿನಂದಿಸಿದರು.

# ಮಂಗಳೂರು ಜೈಲಿನ ಮೇಲೆ ಪೊಲೀಸ್ ದಾಳಿ; 9 ಕೈದಿಗಳಿಂದ 10 ಮೊಬೈಲ್ ವಶ!



ಮಂಗಳೂರು: ಇತ್ತೀಚಿನ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನ ಮೇಲೆ ದಾಳಿ ನಡೆಸಿ ಕೈದಿಗಳಿಂದ ಮೊಬೈಲ್ ವಶಪಡಿಸಿಕೊಂಡ ಬೆನ್ನಲ್ಲೇ ಮಂಗಳೂರು ಜಿಲ್ಲಾ ಕಾರಾಗೃಹದ ಮೇಲೂ ಪೊಲೀಸರು ದಿಢೀರ್ ದಾಳಿ ನಡೆಸಿದ್ದು, 10 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಒಂಬತ್ತು ವಿಚಾರಣಾಧೀನ ಕೈದಿಗಳನ್ನು ಇರಿಸಲಾಗಿದ್ದ ಎ-ಬ್ಲಾಕ್‌ನಿಂದ ಹತ್ತು ಸ್ಮಾರ್ಟ್‌ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ವಿಚಾರಣಾಧೀನ ಕೈದಿಗಳು ನಿಷೇಧಿತ ಮೊಬೈಲ್ ಫೋನ್‌ಗಳನ್ನು ಬಳಸುತ್ತಿರುವ ಬಗ್ಗೆ ನಿರ್ದಿಷ್ಟ ಮಾಹಿತಿಯನ್ನು ಆಧರಿಸಿ ಈ ಶೋಧ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ.

ಪೊಲೀಸರ ಪ್ರಕಾರ, ಭಾರತೀಯ ನ್ಯಾಯ ಸಂಹಿತೆ ಮತ್ತು ಕರ್ನಾಟಕ ಕಾರಾಗೃಹ ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಬರ್ಕೆ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಿಸಲಾಗಿದೆ.

ಕೈದಿಗಳಾದ ರಿಫತ್ ಅಲಿ, ಇಬ್ರಾಹಿಂ ಖಲೀಲ್, ಅಸ್ಫಾಕ್ ಅಲಿಯಾಸ್ ಜುಟ್ಟು ಅಸ್ಫಾಕ್, ಅರ್ಷದ್, ದಾವೂದ್ ಪರ್ವೇಜ್, ನಜ್ರತ್ ಅಲಿ, ಶಿಫಾನ್, ಅಬ್ದುಲ್ ಸಾದಿಕ್ ಮತ್ತು ಅರ್ಫಜ್ ಅಕ್ರಮವಾಗಿ ಜೈಲಿನಲ್ಲಿ ಮೊಬೈಲ್ ಬಳಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಕೈದಿಗಳ ಪೈಕಿ ರಿಫತ್ ಅಲಿ, ಇಬ್ರಾಹೀಂ ಖಲೀಲ್, ಅಶ್ಫಾಕ್ ಅಲಿಯಾಸ್ ಜುಟ್ಟು ಅಶ್ಫಾಕ್, ಅರ್ಷದ್ ಇತ್ತೀಚೆಗೆ ತೊಕ್ಕೊಟ್ಟು ಬಳಿ ನಡೆದ ಆರಿಫ್ ಕೊಲೆ ಪ್ರಕರಣದ ಆರೋಪಿಗಳಾಗಿದ್ದಾರೆ. ದಾವೂದ್ ಫರ್ವೇಝ್, ನಝುರತ್ ಅಲಿ, ಶಿಫಾನ್, ಅಬ್ದುಲ್ ಸಾದಿಕ್ ಡ್ರಗ್ಸ್ ಪೆಡ್ಲರ್ ಆರೋಪಿಗಳಾಗಿದ್ದರೆ, ಅರ್ಫಾಝ್ ಕೋಕಾ ಪ್ರಕರಣದ ಆರೋಪಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಾರ್ಕೆ ಪೊಲೀಸರು ವಶಪಡಿಸಿಕೊಂಡ ಫೋನ್‌ಗಳ ಬಳಕೆ ಮತ್ತು ಪೂರೈಕೆಯ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

# 6,000 ಕ್ಯುಸೆಕ್ ನೀರು ಹರಿಸುವಂತೆ ಆದೇಶ: 'ಸುಪ್ರೀಂ' ಮೊರೆ ಹೋಗಲು ಸರ್ಕಾರ ಚಿಂತನೆ





ಬೆಂಗಳೂರು: ತಮಿಳುನಾಡಿಗೆ ಪ್ರತಿ ದಿನ ಆರು ಸಾವಿರ ಕ್ಯುಸೆಕ್ ನೀರು ಹರಿಸುವಂತೆ 'ಕಾವೇರಿ ನೀರು ನಿಯಂತ್ರಣ ಸಮಿತಿ' ನೀಡಿರುವ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ಚಿಂತನೆ ನಡೆಸಲಾಗಿದೆ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಸುದ್ದಿಗಾರರ ಜತೆಗೆ ಮಂಗಳವಾರ ಮಾತನಾಡಿದ ಅವರು, 'ಕಾವೇರಿ ನೀರು ನಿಯಂತ್ರಣ ಸಮಿತಿಯ ಆದೇಶವು ಅಸಂಬದ್ಧವಾಗಿದೆ. ಮುಖ್ಯಮಂತ್ರಿ ಜತೆ ಚರ್ಚಿಸಿ ಬುಧವಾರವೇ ಸುಪ್ರೀಂ ಕೋರ್ಟ್ ಮೊರೆ ಹೋಗುವ ಬಗ್ಗೆ ತೀರ್ಮಾನಿಸಲಾಗುವುದು' ಎಂದರು.

'ಸಭೆಯಲ್ಲಿ ನಮ್ಮ ಅಧಿಕಾರಿಗಳು ರಾಜ್ಯದಲ್ಲಿನ ಮಳೆ ಮತ್ತು ನದಿ ನೀರಿನ ವಾಸ್ತವ ಸ್ಥಿತಿಯ ಬಗ್ಗೆ ಪ್ರಬಲ ವಾದ ಮಂಡಿಸಿದ್ದಾರೆ. ತಮಿಳುನಾಡು 17 ಸಾವಿರ ಕ್ಯುಸೆಕ್ ನೀರಿಗೆ ಬೇಡಿಕೆ ಇಟ್ಟಿತ್ತು. ಆದರೆ, ಕಳೆದ ಒಂದು ವಾರದಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಒಳಹರಿವು ಗಣನೀಯವಾಗಿ ಕಡಿಮೆಯಾಗಿದೆ. ಇಂತಹ ಸಂಕಷ್ಟದ ಸ್ಥಿತಿಯಲ್ಲಿ 6 ಸಾವಿರ ಕ್ಯುಸೆಕ್ ನೀರು ಹರಿಸುವುದೂ



**ದೆಹಲಿಯಲ್ಲಿ ಕುಳಿತು ಕಾರ್ಯನಿರ್ವಹಿಸುವ ಸಾಂವಿಧಾನಿಕ ಮತ್ತು ಆಡಳಿತಾತ್ಮಕ ಪೀಠಗಳಿಗೆ ತಳಮಟ್ಟದ ವಾಸ್ತವ ಸ್ಥಿತಿಯೇ ಅರ್ಥವಾಗುತ್ತಿಲ್ಲ. ಈ ಹಿಂದೆಯೂ ವಾಸ್ತವ ಅರಿಯದೆ ಇದೇ ರೀತಿ ಆದೇಶಗಳನ್ನು ನೀಡಿರುವ ನಿದರ್ಶನಗಳಿವೆ.**

**– ಎನ್. ಚಲುವರಾಯಸ್ವಾಮಿ**
**ಜಲಸಂಪನ್ಮೂಲ ಸಚಿವ**

ನಮಗೆ ಅಸಾಧ್ಯ' ಎಂದು ವಿವರಿಸಿದರು.

ರಾಜ್ಯದ ಜಲಾಶಯಗಳ ಸ್ಥಿತಿಗತಿ ವಿವರಿಸಿದ ಅವರು, 'ಈಗ ಅಣೆಕಟ್ಟೆಗಳಲ್ಲಿರುವ ನೀರಿನ ಪೈಕಿ ಶೇ 50ರಷ್ಟನ್ನು ಕುಡಿಯುವ ಉದ್ದೇಶಕ್ಕೆ ಮೀಸಲಿಡಲಾಗಿದೆ. ಭದ್ರಾ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ರೈತರ ಬೆಳೆಗಳಿಗೆ ಅಗತ್ಯಕ್ಕೆ ತಕ್ಕಂತೆ ನೀರು ಒದಗಿಸಲಾಗಿದೆ. ಚಿತ್ರದುರ್ಗ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಣೆಕಟ್ಟೆಗಳಿಂದ ನಿಯಂತ್ರಿತವಾಗಿ ನೀರು ನಿರ್ವಹಣೆ ಮಾಡಲಾಗುತ್ತಿದೆ' ಎಂದು ಚಲುವರಾಯಸ್ವಾಮಿ ಹೇಳಿದರು.

## ಖರ್ಗೆ ಕುಟುಂಬದ ಟ್ರಸ್ಟ್‌ಗೆ ಜಮೀನು: ದೂರು ಮುಂದುವರಿಕೆಗೆ ನಿರ್ದೇಶನ

ಬೆಂಗಳೂರು: 'ಖಾಸಗಿ ದೂರು ಸಲ್ಲಿಕೆಯಲ್ಲಿನ ಪ್ರಮಾಣ ಪತ್ರದ ತಾಂತ್ರಿಕ ದೋಷವನ್ನು ಮುಂದು ಮಾಡಿಕೊಂಡು ರಾಜಕಾರಣಿಗಳ ವಿರುದ್ಧದ ಭ್ರಷ್ಟಾಚಾರ ಆರೋಪದ ಪ್ರಕರಣವನ್ನು ಲೋಕಾಯುಕ್ತ ತನಿಖೆಗೆ ವಹಿಸುವ ಬದಲಿಗೆ ವಿಚಾರಣಾ ನ್ಯಾಯಾಲಯ ಸ್ವತಃ ವಿಚಾರಣೆಗೆ ಮುಂದಾಗುವುದು ತರವಲ್ಲ' ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಈ ಮೂಲಕ, 'ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬದ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ನಿಯಮಬಾಹಿರವಾಗಿ ನಿವೇಶನ ಮಂಜೂರು ಮಾಡಲಾಗಿದೆ' ಎಂಬ ದೂರಿನ ಪ್ರಕರಣವನ್ನು ಜನಪ್ರತಿನಿಧಿಗಳ ಸೆಷನ್ಸ್ ನ್ಯಾಯಾಲಯಕ್ಕೆ ಹಿಂದಿರುಗಿಸಿ ಆದೇಶಿಸಿದೆ. 'ನಾನು ಸಲ್ಲಿಸಿರುವ ಖಾಸಗಿ ದೂರಿನ ಪ್ರಮಾಣಪತ್ರ ಸಮರ್ಪಕವಾಗಿಲ್ಲ. ಅದು ಸುಪ್ರೀಂ ಕೋರ್ಟ್ ರೂಪಿಸಿರುವ ಅಂಶಗಳಿಗೆ ಅನುಗುಣವಾಗಿಲ್ಲ, ದೋಷಗಳಿವೆ ಎಂದು ಉಲ್ಲೇಖಿಸುವ ಮೂಲಕ ಜನಪ್ರತಿನಿಧಿಗಳ ಸೆಷನ್ಸ್ ನ್ಯಾಯಾಲಯ ತಾನೇ ವಿಚಾರಣೆಗೆ ಮುಂದಾಗಿರುವುದು ಕಾನೂನಾತ್ಮಕವಾಗಿ ತಪ್ಪು' ಎಂದು ಆಕ್ಷೇಪಿಸಿ ದೂರುದಾರ ವಿಜಯರಾಘವ ಮರಾಠೆ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ಮೇಲಿನ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಪ್ರಕಟಿಸಿದೆ. ಅರ್ಜಿದಾರರ ಪರ ವಾದ ಮಂಡಿಸಿದ್ದ ಪದಾಂಕಿತ ಹಿರಿಯ ವಕೀಲೆ ಲಕ್ಷ್ಮಿ ಐಯ್ಯಂಗಾರ್, 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ–ಯ ಸೆಷನ್ಸ್ ನ್ಯಾಯಾಲಯ ಈ ಕೇಸಿನಲ್ಲಿ ಹುರುಳಿಲ್ಲ ಎಂದು ಎಲ್ಲೂ ಹೇಳಿಲ್ಲ. ದೂರು ತನಿಖೆಗೆ ಯೋಗ್ಯವಾಗಿದೆ ಎಂದು ಮೇಲ್ನೋಟಕ್ಕೆ ಒಪ್ಪಿಕೊಂಡಿರುವುದು ದೃಢಪಟ್ಟಿದೆ.

# ಸುಸ್ಥಿರ ಸಮಾಜ, ದೇಶದ ಪ್ರಗತಿಗಾಗಿ ಪ್ರತಿಯೊಬ್ಬರು ನವಸಾಕ್ಷರರಾಗಿ : ಆರ್. ಲಿಂಗರಾಜು



ಚಾಮರಾಜನಗರ : ಸುಸ್ಥಿರ ಸಮಾಜ ನಿರ್ಮಾಣ ಹಾಗೂ ದೇಶದ ಪ್ರಗತಿಗಾಗಿ ಪ್ರತಿಯೊಬ್ಬರು ನವಸಾಕ್ಷರರಾಗುವಂತೆ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಹಾಗೂ ಡಯಟ್ ಪ್ರಾಂಶುಪಾಲರಾದ ಆರ್. ಲಿಂಗರಾಜು ಅವರು ಸಲಹೆ ಮಾಡಿದರು.

ಚಾಮರಾಜನಗರ ತಾಲೂಕಿನ ನಾಗವಳ್ಳಿ ಗ್ರಾಮದ ಪಿ.ಎಂ.ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವೇದಿಕೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಕಚೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ದೇಶಾದ್ಯಂತ 60ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಅನಕ್ಷರಸ್ಥರನ್ನು ನವ ಸಾಕ್ಷರರನ್ನಾಗಿ ರೂಪಿಸುವುದೇ ಸಾಕ್ಷರತಾ ದಿನದ ಪ್ರಮುಖ ಉದ್ದೇಶವಾಗಿದೆ. ಅಕ್ಷರಭ್ಯಾಸ ಕಲಿತವರು ವ್ಯವಹಾರ ಜ್ಞಾನವನ್ನು ವೃದ್ಧಿಸಿಕೊಳ್ಳಬಹುದಾಗಿದೆ. ಅನಕ್ಷರಸ್ಥರನ್ನು ಮೌಢ್ಯತೆ ಕಾಡಲಿದೆ. ಸಾಮಾಜಿಕ ಅಸಮತೋಲನ ಹೆಚ್ಚಾಗಲಿದೆ. ಈ ನಿಟ್ಟಿನಲ್ಲಿ ಅನಕ್ಷರಸ್ಥರಾಗಿರುವ ಪ್ರತಿಯೊಬ್ಬರು ಅಕ್ಷರ ಕಲಿತು ಸಾಕ್ಷರರಾಗಲು ಮುಂದಾಗಬೇಕು. ಅಕ್ಷರ ಕಲಿಕೆ ಭವಿಷ್ಯದ ಸುಸ್ಥಿರ ಜೀವನ ಕಟ್ಟಿಕೊಳ್ಳಲು ನೆರವಾಗಲಿದೆ ಎಂದರು.

ನಾಗವಳ್ಳಿಯ ಪಿ.ಎಂ.ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 127 ವರ್ಷಗಳ ಇತಿಹಾಸವಿದ್ದು, ಶೈಕ್ಷಣಿಕ ವ್ಯವಸ್ಥೆಗೆ ಪೂರಕ ವಾತಾವರಣವಿದೆ. 2025–26ನೇ ಸಾಲಿನ ಲಿಂಕ್ ಡಾಕುಮೆಂಟ್ ಕಾರ್ಯಕ್ರಮದಡಿ ಚಾಮರಾಜನಗರ ತಾಲೂಕಿನ ನಾಗವಳ್ಳಿ 1250 ಹಾಗೂ ಹನೂರು ತಾಲೂಕಿನ ಅಜ್ಜೀಪುರ ಗ್ರಾಮದ 1250 ಸೇರಿದಂತೆ 2500 ಮಂದಿ ಪೈಕಿ 2448 ಅನಕ್ಷರಸ್ಥರನ್ನು ನವಸಾಕ್ಷರರನ್ನಾಗಿ ಮಾಡುವ ನಿಗದಿತ ಗುರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಸಾಕ್ಷರತೆಗೆ ಯಾವುದೇ ವಯಸ್ಸಿನ ಮಿತಿ ಇರುವುದಿಲ್ಲ ಎಂದು ಆರ್. ಲಿಂಗರಾಜು ಅವರು ತಿಳಿಸಿದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕರಾದ ಶಿವಕುಮಾರ್ ಅವರು ಮಾತನಾಡಿ ಅನಕ್ಷರಸ್ಥರನ್ನು ಅಕ್ಷರ ಕಲಿಯುವ ಅರಿವು ಮೂಡಿಸಲು ಪ್ರತಿವರ್ಷ ಸೆಪ್ಟೆಂಬರ್ 8ರಂದು ಅಂತರಾಷ್ಟ್ರೀಯ ಸಾಕ್ಷರತಾ ದಿನವನ್ನು ಆಚರಿಸಲಾಗುತ್ತದೆ. ನವಭಾರತ ಸಾಕ್ಷರತಾ ಕಾರ್ಯಕ್ರಮದಡಿಯಲ್ಲಿ 15 ವರ್ಷಕ್ಕಿಂತ ಮೇಲ್ಪಟ್ಟ ಅನಕ್ಷರಸ್ಥರನ್ನು ನವಸಾಕ್ಷರರನ್ನಾಗಿ ಮಾಡಲಾಗುತ್ತಿದೆ. ಅಕ್ಷರದ ಮಹತ್ವವನ್ನು ಎಲ್ಲರೂ ಅರಿಯಬೇಕು. ತಾವು ಕಲಿತು ತಮ್ಮ ಸುತ್ತಲಿನ ಜನರಿಗೂ ಅಕ್ಷರ ಕಲಿಸಲು ಮುಂದಾಗಬೇಕು ಎಂದು ತಿಳಿಸಿದರು.

ಡಯಟ್ ಸಂಸ್ಥೆಯ ಉಪನ್ಯಾಸಕರಾದ ನಾಗರಾಜು ಅವರು ಮಾತನಾಡಿ ಅನಕ್ಷರತೆ ಮಹಾಪಾಪ, ಅನಕ್ಷರತೆಯನ್ನು ನಿರ್ಮೂಲನೆ ಮಾಡದ ಹೊರತು ದೇಶಕ್ಕೆ ಭವಿಷ್ಯವಿಲ್ಲ. 2011ರ ಜನಗಣತಿ ಪ್ರಕಾರ ದೇಶದಲ್ಲಿ ಸಾಕ್ಷರರ ಸಂಖ್ಯೆ ಶೇ. 61 ರಷ್ಟು ಮಾತ್ರ. ಸಾಕ್ಷರತೆಯನ್ನು ಹೆಚ್ಚಿಸುವ ಸಲುವಾಗಿ ನವಸಾಕ್ಷರ ಕಾರ್ಯಕ್ರಮ ನಿರ್ವಹಣೆಗೆ ಲಿಂಕ್ ಡಾಕುಮೆಂಟ್ ಕಾರ್ಯಕ್ರಮದಡಿ ಅನುದಾನ ನೀಡಿ ಅನಕ್ಷರಸ್ಥರನ್ನು ಸಮಾಜದ ಮುಖ್ಯವಾಹಿನಿಗೆ ತರಲಾಗುತ್ತಿದೆ. ಅಕ್ಷರಸ್ಥರಿಗೆ ಕಲಿಸುವ ಬೋಧಕರು ಸೇವಾ ಮನೋಭಾವನೆಯಿಂದ ಕೆಲಸ ಮಾಡುವಂತೆ ಸಲಹೆ ಮಾಡಿದರು.

ನಾಗವಳ್ಳಿ ಗ್ರಾಮದ ಪಿ.ಎಂ.ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಶಾಂತಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಡಯಟ್ ಉಪನ್ಯಾಸಕರಾದ ಮಂಜುಳ, ವಾರ್ತಾ ಇಲಾಖೆಯ ವಾರ್ತಾ ಸಹಾಯಕರಾದ ಸುರೇಶ್‌ಕುಮಾರ್, ಶಿಕ್ಷಣ ಇಲಾಖೆಯ ಸಿ.ಆರ್.ಪಿ ಗಳಾದ ಸೋಮಣ್ಣ, ಶಿವಮೂರ್ತಿ, ಪುಟ್ಟು, ಶಾರದ, ಬಿ.ಐ.ಇ.ಆರ್.ಟಿ ರೆಬೆಲೋ, ಸಾಕ್ಷರತಾ ಕಾರ್ಯಕ್ರಮ ನಿರ್ವಾಹಕರಾದ ಶೋಭಾ ರಾಥೋಡ್, ಶಾಲಾ ಶಿಕ್ಷಕರಾದ ರಾಜಮ್ಮ, ಜಯಮ್ಮ, ಶಾಲಾ ಎಸ್.ಡಿ.ಎಂ.ಸಿ. ಸದಸ್ಯರಾದ ಸುಮಯಾ ಬಾನು, ಮುಖಂಡರಾದ ಅಸ್ಲಂ ಪಾಶ, ದೇವಮ್ಮ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ತೇಜಸ್ವಿ ಸಾಹಿತ್ಯ ಮಾತ್ರವಲ್ಲ, ನಿಸರ್ಗ ವಿಜ್ಞಾನಿಯೂ ಹೌದು: ಮ.ಲ.ನ. ಮೂರ್ತಿ



ಮಧುಗಿರಿ: ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರು ಕೇವಲ ಸಾಹಿತಿಯಲ್ಲ, ನಿಸರ್ಗ ವಿಜ್ಞಾನಿ ಹಾಗೂ ಸಂಶೋಧಕರಾಗಿಯೂ ಗುರುತಿಸಿಕೊಂಡವರು. ಅವರು ರಾಷ್ಟ್ರಕವಿ ಕುವೆಂಪು ಅವರ ಪುತ್ರರಾಗಿದ್ದು, ತಮ್ಮ ವಿಶಿಷ್ಟ ಚಿಂತನೆಗಳ ಮೂಲಕ ಕನ್ನಡ ಸಾಹಿತ್ಯಕ್ಕೆ ಹೊಸ ಆಯಾಮ ನೀಡಿದರು ಎಂದು ಸಾಹಿತಿ ಮ.ಲ.ನ. ಮೂರ್ತಿ ಹೇಳಿದರು.

ಪಟ್ಟಣದ ಸಹೃದಯ ಬಳಗದ ವತಿಯಿಂದ ಶ್ರೀ ಟಿ.ವಿ.ವಿ. ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ತೇಜಸ್ವಿಯವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಲೋಹಿಯಾ ಚಿಂತನೆಗಳಿಂದ ಪ್ರಭಾವಿತರಾಗಿದ್ದ ತೇಜಸ್ವಿ, ಕನ್ನಡ ಸಾಹಿತ್ಯದ ಪರಿಸರವನ್ನು ವಿಸ್ತರಿಸುವಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು.

ತೇಜಸ್ವಿಯವರ 'ಬೃಹನ್ನಳೆ–ಸೋಮುವಿನ ಸ್ವಗತ ಲಹರಿ' ಕವನ ಸಂಕಲನ, 'ಯಮಳ ಪ್ರಶ್ನೆ' ನಾಟಕ, 'ಹುಲಿಯೂರಿನ ಸರಹದ್ದು' ಹಾಗೂ 'ಅಬಚೂರಿನ ಪೋಸ್ಟಾಫೀಸು' ಕಥಾಸಂಕಲನಗಳು ಮತ್ತು 'ಸ್ವರೂಪ', 'ನಿಗೂಢ ಮನುಷ್ಯರು', 'ಕರ್ವಾಲೋ' ಸೇರಿದಂತೆ ಹಲವು ಕೃತಿಗಳು ಕನ್ನಡ ಸಾಹಿತ್ಯದಲ್ಲಿ ವಿಶಿಷ್ಟ ಸ್ಥಾನ ಪಡೆದಿವೆ ಎಂದು ತಿಳಿಸಿದರು.

ಅವರ ಸಾಹಿತ್ಯ ಕೃತಿಗಳು ಇತರ ಭಾಷೆಗಳಿಗೂ ಅನುವಾದಗೊಂಡಿದ್ದು, 'ತಬರನ ಕತೆ', 'ಅಬಚೂರಿನ ಪೋಸ್ಟಾಫೀಸು' ಹಾಗೂ 'ಕುಬಿ ಮತ್ತು ಇಯಾಲ' ಕೃತಿಗಳು ಚಲನಚಿತ್ರಗಳಾಗಿ ಪ್ರಶಸ್ತಿ ಹಾಗೂ ಜನಮೆಚ್ಚುಗೆ ಗಳಿಸಿವೆ. ತೇಜಸ್ವಿಯವರು ರಾಜ್ಯ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕಾರಗಳನ್ನೂ ಪಡೆದಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಹನುಮಂತರಾಯಪ್ಪ ತೇಜಸ್ವಿಯವರ ಸಾಹಿತ್ಯ ಸಾಧನೆ ಕುರಿತು ಮಾತನಾಡಿದರು. ಬಳಗದ ಕಾರ್ಯದರ್ಶಿ ಜಿ.ಎಸ್. ನಾಗಭೂಷಣ ಸ್ವಾಗತಿಸಿದರು. ಉಪನ್ಯಾಸಕಿ ಪಲ್ಲವಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ವಿದ್ಯಾರ್ಥಿಗಳಿಂದ ತೇಜಸ್ವಿಯವರ ಸಾಹಿತ್ಯ ಕುರಿತ ಸಂವಾದವೂ ನಡೆಯಿತು.

# ವೇದಮೂರ್ತಿ ಗಡಿಪಾರಿಗೆ ಒತ್ತಾಯಿಸಿ ದಲಿತ ಸಂಘಟನೆಗಳ ಮನವಿ



**ಅಂಬೇಡ್ಕರ್, ಬುದ್ಧ, ಬಸವಣ್ಣರ ಅವಹೇಳನ ಆರೋಪ**

**ರಾಜ್ಯಪಾಲರಿಗೆ ತಹಶೀಲ್ದಾರ್ ಮೂಲಕ ಮನವಿ**

ಯಳಂದೂರು : ಡಾ.ಬಿ.ಆರ್. ಅಂಬೇಡ್ಕರ್, ಬುದ್ಧ ಹಾಗೂ ಬಸವಣ್ಣರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವ ಮಂಡ್ಯ ಜಿಲ್ಲೆ, ಕೆ.ಆರ್. ಪೇಟೆ ತಾಲೂಕು ಬೂಕನಕೆರೆ ಹೋಬಳ ದೊಡ್ಡಯಾಚೇನಹಳ್ಳಿ ಗ್ರಾಮದ ವೇದಮೂರ್ತಿಯನ್ನು ರಾಜ್ಯದಿಂದ ಗಡಿಪಾರು ಮಾಡುವಂತೆ ಒತ್ತಾಯಿಸಿ ವಿವಿಧ ದಲಿತಪರ ಸಂಘಟನೆಗಳು ಮಂಗಳವಾರ ರಾಜ್ಯಪಾಲರಿಗೆ ತಹಶೀಲ್ದಾರ್ ಮೂಲಕ ಮನವಿ ಪತ್ರ ಸಲ್ಲಿಸಿದರು.

ವೇದಮೂರ್ತಿ ಎಂಬಾತ ತನ್ನ ಫೇಸ್‌ಬುಕ್ ಖಾತೆಯಲ್ಲಿ ರಾಷ್ಟ್ರ ನಾಯಕರು, ದಲಿತ ಜನಾಂಗವನ್ನು ನಿಂದಿಸಿದ್ದಾನೆ. ಅಲ್ಲದೆ, ದಲಿತ ಜನಾಂಗದ ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ್ ಖರ್ಗೆರನ್ನು ಏಕ ವಚನದಲ್ಲಿ ಅವಾಚ್ಯ ಶಬ್ಧಗಳಿಂದ ನಿಂದಿಸಿದ್ದಾನೆ. ಈತ ತನ್ನ ವಿಡಿಯೋಗಳಲ್ಲಿ ಮೀಸಲಾತಿ ವಿರುದ್ಧ ಮಾತನಾಡಿದ್ದಾನೆ. ಬುದ್ಧ, ಬಸವ ಅಂಬೇಡ್ಕರ್‌ರನ್ನು ಈಳು ಭಾಷೆಯನ್ನು ಬಳಸಿ ನಿಂದಿಸಿದ್ದಾನೆ. ಇಂತಹ ಹೇಳಿಕೆಗಳಿಂದ ಸಮಾಜದಲ್ಲಿ ಶಾಂತಿ ಕದಡುತ್ತದೆ. ಜಾತಿ ಸಂಘರ್ಷಕ್ಕೆ ಇದು ಕಾರಣವಾಗುವ ಸಾಧ್ಯತೆ ಇದೆ. ಇಂತಹ ಪ್ರಚೋನಾಧಿಕಾರಿ, ಸಮಾಜ ಘಾತುಕ ಹೇಳಿಕೆಗಳನ್ನು ನೀಡುವ ಮೂಲಕ ಕಾನೂನು ವ್ಯವಸ್ಥೆ ಭಂಗ ಮಾಡುವ ಇಂತಹವರ ಹೇಳಿಕೆ ದಲಿತ ಸಮುದಾಯಕ್ಕೆ ಮಾಡಿರುವ ಅವಮಾನವಾಗಿದ್ದು ಕೂಡಲೇ ಈತನನ್ನು ದೇಶದ್ರೋಹ ಕಾಯ್ದೆಯಡಿಯಲ್ಲಿ ಬಂಧಿಸಿ ರಾಜ್ಯದಿಂದ ಗಡಿಪಾರು ಮಾಡಬೇಕೆಂದು ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮನವಿ ಪತ್ರ ಸ್ವೀಕರಿಸಿದ ಗ್ರೇಡ್–02 ತಹಶೀಲ್ದಾರ್ ಶಾಂತಿ ಇದನ್ನು ನಮ್ಮ ಇಲಾಖೆಯ ಮೂಲಕ ರಾಜ್ಯಪಾಲರಿಗೆ ಕಳುಹಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇವಾ ಸಮಿತಿ ಅಧ್ಯಕ್ಷ ಕೆಸ್ತೂರು ಸಿದ್ಧರಾಜು, ಪ್ರಧಾನ ಕಾರ್ಯದರ್ಶಿ ನಟರಾಜು, ಯರಿಯೂರು ರಾಜಣ್ಣ, ದುಗ್ಗಹಟ್ಟಿ ಮಾದೇಶ್, ಮಾಂಬಳ್ಳಿ ರಾಮು, ಯರಂಬಳ್ಳಿ ಮಲ್ಲು, ಸಿದ್ಧರಾಜು, ಅಗ್ರಹಾರ ರಂಗಸ್ವಾಮಿ, ನಾಗರಾಜು ಸೇರಿದಂತೆ ಅನೇಕರು ಇದ್ದರು.

# ಸಾರ್ವಜನಿಕರ ಆಗ್ರಹಕ್ಕೆ ಮಣಿದ ಪುರಸಭೆ





ಚಿಕ್ಕನಾಯಕನಹಳ್ಳಿ: ತೀನಂಶ್ರೀ ಅವರ ಹೆಸರಿನ ಭವನದ ಹಿಂಭಾಗದಲ್ಲಿ ಹಲವು ದಿನಗಳಿಂದ ಉಂಟಾಗಿದ್ದ ಚರಂಡಿ ಸಮಸ್ಯೆ ಬಗ್ಗೆ ಪುರಸಭೆ ಗಮನಕ್ಕೆ ತಂದಿದ್ದರು. ಕೂಡಲೇ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಸ್ವಚ್ಛತಾ ಕಾರ್ಯ ಕೈಗೊಂಡಿದ್ದಾರೆ.

ಚರಂಡಿಯಲ್ಲಿ ಕೊಳಚೆ ಹಾಗೂ ತ್ಯಾಜ್ಯ ಸಂಗ್ರಹಗೊಂಡಿದ್ದರಿಂದ ಕೊಳಚೆ ನೀರು ಸರಾಗವಾಗಿ ಹರಿಯದೆ ಸಾರ್ವಜನಿಕರಿಗೆ ತೊಂದರೆಯಾಗಿತ್ತು. ಈ ಕುರಿತು ಗಮನ ಸೆಳೆದ ಬೆನ್ನಲ್ಲೇ ಪುರಸಭೆ ಸಿಬ್ಬಂದಿ ಚರಂಡಿಯನ್ನು ಸ್ವಚ್ಛಗೊಳಿಸಿ, ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಂಡಿದ್ದಾರೆ.

ಸಾರ್ವಜನಿಕರ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ ಸ್ಥಳದಲ್ಲೇ ಸ್ವಚ್ಛತಾ ಕಾರ್ಯ ಕೈಗೊಂಡ ಪುರಸಭೆ ಸಿಬ್ಬಂದಿಯ ಕ್ರಮಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸಮಸ್ಯೆ ಬಗೆಹರಿಸಲು ಸ್ಪಂದಿಸಿದ ಪುರಸಭೆ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸಾರ್ವಜನಿಕರು ಧನ್ಯವಾದ ತಿಳಿಸಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.